ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 236 ₹ ಬೆಲೆ: 4 Saturday, 11, November,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಬಿಡದಿವರೆಗೆ ಮೆಟ್ರೋ ಸೇವೆ ವಿಸ್ತರಣೆಗೆ ಚಿಂತನೆ: ಡಿಸಿಎಂ ಡಿಕೆ ಶಿವಕುಮಾರ್

ಬೆಂಗಳೂರು: ಮೆಟ್ರೋ ಸಂಚಾರವನ್ನು ಬಿಡದಿವರೆಗೆ ವಿಸ್ತರಿಸುವ ಕುರಿತು ಚಿಂತನೆ ನಡೆಸಲಾಗಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಬಿಡದಿಯಲ್ಲಿ ನೂತನವಾಗಿ ನಿರ್ಮಾಣವಾಗಿರುವ ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆಯ ತಾಂತ್ರಿಕ ತರಬೇತಿ ಕಟ್ಟಡವನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದ ಅವರು, ಬಿಡದಿಯ ಅಭಿವೃದ್ಧಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ಹಾಕಿಕೊಂಡಿರುವುದಾಗಿ ಹೇಳಿದರು.

ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆ ಆಟೋಮೊಬೈಲ್ ಕ್ಷೇತ್ರದಲ್ಲಿ ಉತ್ತಮ ಹೆಸರುಗಳಿಸಿದ್ದು, ಉತ್ಪಾದನಾ ವಲಯದಲ್ಲಿ ಸಾಕಷ್ಟು ಬದಲಾವಣೆ ತಂದಿದೆ. ಕರ್ನಾಟಕ ರಾಜ್ಯದೊಂದಿಗೆ ವಿವಿಧ ಹೂಡಿಕೆ ಮಾಡುವ ಮೂಲಕ ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆ ತಂತ್ರಜ್ಞಾನ ಹಾಗೂ ಹೊಸ ಉದ್ಯಮ ಸೃಷ್ಟಿಸುವಲ್ಲಿ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು.

ಈ ಸಂಸ್ಥೆಯಿಂದ ಬಿಡದಿಯಲ್ಲಿ ಸ್ಥಾಪಿತವಾದ ತಾಂತ್ರಿಕ ತರಬೇತಿ ವಿಭಾಗ ವಿದ್ಯಾರ್ಥಿಗಳ ಕೌಶಲ್ಯ ಹೆಚ್ಚಿಸಿ, ಅವರ ಭವಿಷ್ಯಕ್ಕೆ ಉತ್ತಮ ಅಡಿಪಾಯ ಹಾಕಲಿದೆ ಎಂದರು.

ಡಿಸೆಂಬರ್ 4 ರಿಂದ 22 ರವರೆಗೆ ಸಂಸತ್ ಚಳಿಗಾಲದ ಅಧಿವೇಶನ

ನವದೆಹಲಿ: ಸಂಸತ್ ಚಳಿಗಾಲದ ಅಧಿವೇಶನ ಡಿಸೆಂಬರ್ 4 ರಂದು ಆರಂಭವಾಗಿ ಡಿಸೆಂಬರ್ 22 ರಂದು ಕೊನೆಗೊಳ್ಳಲಿದೆ ಎಂದು ಕೇಂದ್ರ ಸರ್ಕಾರ ಗುರುವಾರ ಪ್ರಕಟಿಸಿದೆ.

2023ರ ಸಂಸತ್ ಚಳಿಗಾಲದ ಅಧಿವೇಶನವು ಡಿಸೆಂಬರ್ 4 ರಂದು ಆರಂಭವಾಗಿ ಡಿಸೆಂಬರ್ 22ರ ವರೆಗೆ ನಡೆಯಲಿದೆ. 19 ದಿನಗಳಲ್ಲಿ 15 ಅಧಿವೇಶನಗಳು ನಡೆಯಲಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಐಪಿಸಿ, ಸಿಆರ್ಪಿಸಿ ಮತ್ತು ಎವಿಡೆನ್ಸ್ ಆಕ್ಟ್ ಅನ್ನು ಬದಲಿಸಲು ಮೂರು ಪ್ರಮುಖ ಮಸೂದೆಗಳನ್ನು ಚಳಿಗಾಲದ ಅಧಿವೇಶನದಲ್ಲಿ ಮಂಡಿಸುವ ಸಾಧ್ಯತೆ ಇದೆ. ಗೃಹ ಇಲಾಖೆ ಸ್ಥಾಯಿ ಸಮಿತಿಯು ಈಗಾಗಲೇ ಈ ಮೂರು ಮಸೂದೆಗೆ ಸಂಬಂಧಿಸಿದ ವರದಿಗಳನ್ನು ಇತ್ತೀಚೆಗೆ ಅಂಗೀಕರಿಸಿದೆ.

ಸಂಸತ್ತಿನಲ್ಲಿ ಬಾಕಿ ಉಳಿದಿರುವ ಮತ್ತೊಂದು ಪ್ರಮುಖ ಮಸೂದೆ ಮುಖ್ಯ ಚುನಾವಣಾ ಆಯುಕ್ತ ಮತ್ತು ಚುನಾವಣಾ ಆಯುಕ್ತರ ನೇಮಕಾತಿಗೆ ಸಂಬಂಧಿಸಿದ ವಿಧೇಯಕವನ್ನು ಈ ಚಳಿಗಾಲದ ಅಧಿವೇಶನದಲ್ಲಿ ಅಂಗೀಕರಿಸುವ ಸಾಧ್ಯತೆ ಇದೆ.

ವಿದ್ಯುತ್ ಚಾಲಿತ ಕರಡು ನೀತಿ ಸಿದ್ಧ; 5 ವರ್ಷಗಳಲ್ಲಿ 50 ಸಾವಿರ ಕೋಟಿ ರೂ. ಹೂಡಿಕೆ ಗುರಿ: ಸಚಿವ ಎಂಬಿ ಪಾಟೀಲ್

ಬೆಂಗಳೂರು: ಸರ್ಕಾರವು ರಾಜ್ಯವನ್ನು ದೇಶದ ವಿದ್ಯುತ್ ಚಾಲಿತ ವಾಹನಗಳ ಕ್ಷೇತ್ರದಲ್ಲಿ ದೇಶಕ್ಕೇ 'ನಂಬರ್ 1' ಮಾಡುವ ಗುರಿಯೊಂದಿಗೆ ಕರಡು ನೀತಿ ರೂಪಿಸಿದ್ದು, ಮುಂದಿನ 5 ವರ್ಷಗಳಲ್ಲಿ 50 ಸಾವಿರ ಕೋಟಿ ರೂ. ಬಂಡವಾಳ ಆಕರ್ಷಿಸುವ ಮತ್ತು 1 ಲಕ್ಷ ಉದ್ಯೋಗ ಸೃಷ್ಟಿಸುವ ಉದ್ದೇಶಗಳನ್ನು ಹೊಂದಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂಬಿ ಪಾಟೀಲ ಹೇಳಿದ್ದಾರೆ.

2023ರಿಂದ 2028ರವರೆಗಿನ ಐದು ವರ್ಷಗಳ ಅವಧಿಯನ್ನು ಗಮನದಲ್ಲಿ ಇಟ್ಟುಕೊಂಡು ರೂಪಿಸಿರುವ ನೀತಿಯ ಕರಡಿನ ಬಗ್ಗೆ ಚರ್ಚಿಸಲು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಉದ್ಯಮ ಪ್ರತಿನಿಧಿಗಳೊಂದಿಗಿನ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು. ಮುಂಬರುವ ದಿನಗಳಲ್ಲಿ ವಿದ್ಯುತ್ ಚಾಲಿತ ವಾಹನಗಳು ನಮ್ಮ ಸಂಚಾರ ಕ್ಷೇತ್ರವನ್ನು ಆಳಲಿವೆ. ಕರಡು ನೀತಿಯಲ್ಲಿ ಬಂಡವಾಳ ಸಬ್ಸಿಡಿಯನ್ನು ಹೆಚ್ಚಿಸಬೇಕೆನ್ನುವ ಸಲಹೆ ಕೊಡಲಾಗಿದೆ. ಜೊತೆಗೆ, ಉತ್ಪಾದನೆ ಆಧರಿಸಿ ಕೊಡುವ ಪ್ರೋತ್ಸಾಹ ಭತ್ಯೆಯನ್ನು ಈಗಿನಂತೆ ಶೇಕಡ 1ರ ಪ್ರಮಾಣದಲ್ಲೇ ಮುಂದುವರಿಸಿಕೊಂಡು ಹೋಗುವ ಚಿಂತನೆಯೂ ಇದರಲ್ಲಿದೆ ಎಂದು ಅವರು ತಿಳಿಸಿದರು.

ಕರಡು ನೀತಿಯು ಕೇವಲ ವಿದ್ಯುಚ್ಚಾಲಿತ ವಾಹನಗಳ ಬಗ್ಗೆ ಮಾತ್ರ ಗಮನ ಹರಿಸಿಲ್ಲ. ಬದಲಿಗೆ ಇದರಲ್ಲಿನ ಕೋಶಗಳಲ್ಲಿರುವ ಅನೋಡ್, ಕ್ಯಾಥೋಡ್, ಸೆಪರೇಟರ್ಸ್, ಕಾರ್ಬೊನೇಟ್, ಸಾಲ್ವೆಂಟ್, ಶಕ್ತಿಶಾಲಿ ಹೈಬ್ರಿಡ್ ವಾಹನಗಳು, ಬ್ಯಾಟರಿ ರೀಸೈಕ್ಲಿಂಗ್ ಸೌಲಭ್ಯ, ಪರೀಕ್ಷಾರ್ಥ ಮೂಲಸೌಕರ್ಯಗಳನ್ನೂ ಕರಡು ನೀತಿಯು ಒಳಗೊಂಡಿದೆ ಎಂದು ಅವರು ವಿವರಿಸಿದರು.

ವಿದ್ಯುತ್ ಚಾಲಿತ ವಾಹನಗಳ ಮತ್ತು ಬಿಡಿಭಾಗಗಳ ತಯಾರಿಕೆಗೆ ಸೂಕ್ತ ಸ್ಥಳಗಳಲ್ಲಿ ಔದ್ಯಮಿಕ ಕ್ಲಸ್ಟರ್ ಗಳನ್ನು ಅಭಿವೃದ್ಧಿಪಡಿಸಲು ಇದರಲ್ಲಿ ಹೇಳಲಾಗಿದೆ. ಇದಕ್ಕೆ ಗೌರಿಬಿದನೂರು ಮತ್ತು ಚಿಕ್ಕಮಲ್ಲಿಗೆವಾಡ ಎರಡನ್ನೂ ತಕ್ಕ ತಾಣಗಳೆಂದು ಗುರುತಿಸಲಾಗಿದೆ. ಉದ್ದೇಶಿತ ಕ್ಲಸ್ಟರುಗಳಲ್ಲಿ ಉತ್ಪಾದನಾ ಚಟುವಟಿಕೆ ಆರಂಭಿಸಲು ಸಜ್ಜುಗೊಳಿಸಿರುವ ಕೈಗಾರಿಕಾ ಶೆಡ್, ಪ್ಲಗ್ & ಪ್ಲೇ ಇನ್ಫ್ರಾಬೇಸ್ಟ್ರಕ್ಚರ್ ಸೌಲಭ್ಯ, ಪರೀಕ್ಷಾ ಪ್ರಯೋಗಾಲಯಗಳು, ತ್ವರಿತ ಅನುಮೋದನೆ ಮುಂತಾದ ಆರು ಅಂಶಗಳಿಗೆ ಒತ್ತು ಕೊಡಲಾಗುವುದು. ಜೊತೆಗೆ ವಿದ್ಯುತ್ಚಾಲಿತ ವಾಹನಗಳ ಬಳಕೆ ಉತ್ತೇಜಿಸಲು ಎಲ್ಲೆಡೆ ಚಾರ್ಜಿಂಗ್ ಸ್ಟೇಷನ್ಗಳನ್ನು ತ್ವರಿತ ಗತಿಯಲ್ಲಿ ಸ್ಥಾಪಿಸುವ ಚಿಂತನೆ ಇದೆ ಎಂದು ಅವರು ನುಡಿದರು.

ಈ ಕ್ಷೇತ್ರದಲ್ಲಿ ಸಂಶೋಧನೆಗೆ ಒತ್ತು ನೀಡಲು 'ಕಾಮನ್ ಫೆಸಿಲಿಟೀಸ್' ಮತ್ತು ಪರೀಕ್ಷಾ ಮೂಲಸೌಕರ್ಯಗಳನ್ನು ಒದಗಿಸುವ ಚಿಂತನೆ ಇದೆ. ಇದಕ್ಕಾಗಿ ಖಾಸಗಿಯವರಿಗೆ ಅವರು ಹೂಡುವ ಬಂಡವಾಳದ ಮೇಲೆ ಗರಿಷ್ಠ ಶೇಕಡ 30ರವರೆಗೂ ಪ್ರೋತ್ಸಾಹನ ಭತ್ಯೆ ನೀಡಲು ಕರಡು ನೀತಿಯು ಶಿಫಾರಸು ಮಾಡಿದೆ. ಇ.ವಿ. ಕ್ಷೇತ್ರದ ಬೆಳವಣಿಗೆಗೆ ಬೇಕಾದ ಸೂಕ್ತ ಕಾರ್ಯ ಪರಿಸರ ನಿರ್ಮಾಣ ಇದರ ಉದ್ದೇಶವಾಗಿದೆ ಎಂದು ಪಾಟೀಲ ಹೇಳಿದರು.

ಐಟಿಐ ಅಳವಡಿಕೆಗೆ ಒತ್ತು:

ವಿದ್ಯುತ್ ಚಾಲಿತ ವಾಹನಗಳ ಉದ್ಯಮಕ್ಕೆ ಕೌಶಲಪೂರ್ಣ ಮಾನವ ಸಂಪನ್ಮೂಲದ ತೀವ್ರ ಅಗತ್ಯವಿದೆ. ಇದಕ್ಕಾಗಿ ಕಂಪನಿಗಳೇ ಐಟಿಐ ತರಬೇತಿ ಕೋರ್ಸನ್ನು ಅಳವಡಿಸಿಕೊಳ್ಳುವ ಸಲಹೆ ಇದರಲ್ಲಿದೆ. ಇದರಿಂದಾಗಿ ತರಬೇತಿಗೆ ಮೀಸಲಿಡುವ ಸಮಯದಲ್ಲಿ ಶೇ.40ರಷ್ಟು ಉಳಿತಾಯವಾಗಲಿದೆ, 2 ರಿಂದ 4 ತಿಂಗಳ ಕಾಲಾವಧಿಯು ಕೂಡ ಕಡಿಮೆಯಾಗಲಿದೆ. ಇದರ ಜೊತೆಗೆ ಕಂಪನಿಗಳು ಇ.ವಿ. ನವೋದ್ಯಮಗಳು, ಸ್ಥಳೀಯ ವಿಶ್ವವಿದ್ಯಾಲಯಗಳ ಜೊತೆ ಸಹಭಾಗಿತ್ವ ಹೊಂದಬೇಕೆಂದು ಕರಡು ನೀತಿಯು ಹೇಳಿದೆ.

ಇ.ವಿ ಕ್ಲಸ್ಟರ್ಸ್ ಸ್ಥಾಪನೆ, ಚಾರ್ಜಿಂಗ್ ಸೌಲಭ್ಯಕ್ಕೆ ಸಲಹೆ:

ಸಭೆಯಲ್ಲಿ ಪಾಲ್ಗೊಂಡಿದ್ದ ಹಲವು ಉದ್ಯಮಿಗಳು ಮೈಸೂರು, ಹುಬ್ಬಳ್ಳಿ ಮುಂತಾದ ಕಡೆಗಳಲ್ಲಿ ಇ.ವಿ.ಕ್ಲಸರ್ ಗಳನ್ನು ಸ್ಥಾಪಿಸುವಂತೆ ಸಲಹೆ ನೀಡಿದರು. ಜೊತೆಗೆ ಬೆಂಗಳೂರು–ಪುಣೆ ಮಧ್ಯೆ 10 ಹೆದ್ದಾರಿ ಟೋಲ್ ಇದ್ದು, ಇಲ್ಲೆಲ್ಲ ಎರಡೂ ಬದಿಗಳಲ್ಲಿ ಇ.ವಿ. ಚಾರ್ಜಿಂಗ್ ಸ್ಟೇಷನ್ ಗಳನ್ನು ಸ್ಥಾಪಿಸಲಾಗುವುದು ಎಂದು ಸಚಿವರು ಹೇಳಿದರು.

ಇದಲ್ಲದೆ, ರಾಜ್ಯದ ಉಳಿದೆಡೆಗಳಲ್ಲೂ ಚಾರ್ಜಿಂಗ್ ಸೌಲಭ್ಯ ಒದಗಿಸಬೇಕಾದ ಜರೂರಿರುವ ಬಗ್ಗೆ ಗಮನ ಸೆಳೆದಿದ್ದಾರೆ. ಇವೆಲ್ಲವನ್ನೂ ಗಂಭೀರವಾಗಿ ಪರಿಗಣಿಸಿ, ಕ್ರಮ ವಹಿಸಲಾಗುವುದು ಎಂದು ಸಚಿವ ಎಂ ಬಿ ಪಾಟೀಲ ಭರವಸೆ ನೀಡಿದರು.

ಸನ್ ಮೊಬಿಲಿಟಿ ಅಧ್ಯಕ್ಷ ಸಂದೀಪ ಮೈನಿ, ಟೊಯೊಟಾ ಉಪ ವ್ಯವಸ್ಥಾಪಕ ನಿರ್ದೇಶಕ ಪರಶುರಾಮನ್, ಕಾಂಟಿನೆಂಟಲ್ ಅಧ್ಯಕ್ಷ ಪ್ರಶಾಂತ್ ದೊರೆಸ್ವಾಮಿ, ಎಕ್ಸೆಲ್ ಪಾರ್ಟ್ನರ್ಸ್ ಎಂಡಿ ಪ್ರಶಾಂತ ಪ್ರಕಾಶ ಸೇರಿದಂತೆ 40ಕ್ಕೂ ಹೆಚ್ಚು ಮಂದಿ ಸಭೆಗಳಲ್ಲಿ ಭಾಗವಹಿಸಿದ್ದರು. ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತರಾದ ಗುಂಜನ್ ಕೃಷ್ಣ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಂತೇಶ, ಸಾರಿಗೆ ಇಲಾಖೆ ಹೆಚ್ಚುವರಿ ಆಯುಕ್ತ ಉಮಾಶಂಕರ್ ಇದ್ದರು.

ಪರೀಕ್ಷೆ ಅಕ್ರಮ ಕೇಸ್

ಕಿಂಗ್‌ಪಿನ್ ಆರ್.ಡಿ ಪಾಟೀಲ್ ಅಂದರ

ಬೆಂಗಳೂರು: ಇಷ್ಟು ದಿನಗಳಿಂದ ತಲೆ ಮರೆಸಿಕೊಂಡಿದ್ದ ಎಫ್ಡಿಎ ಪರೀಕ್ಷೆ ಅಕ್ರಮದ ಕಿಂಗ್ಪಿನ್ ಆರ್ಡಿ ಪಾಟೀಲ್ ಅವರನ್ನು ಪೊಲೀಸ್ರು ಕೊನೆಗೂ ಅರೆಸ್ಟ್ ಮಾಡಿದ್ದಾರೆ.

ಪರೀಕ್ಷಾ ಕಳ್ಳಾಟದ ಕಿಂಗ್ಪಿನ್ ಆರ್ಡಿ ಪಾಟೀಲ್ ಮಹಾರಾಷ್ಟ್ರದಲ್ಲಿ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾನೆ. ಸದ್ಯ ಆರ್ಡಿ ಪಾಟೀಲ್ನನ್ನು ಕಲಬುರಗಿಗೆ ಪೊಲೀಸರು ಕರೆ ತರುತ್ತಿದ್ದಾರೆ. ಪಾಟೀಲ್ಗೆ ರಕ್ಷಣೆ ನೀಡಿದ್ದ ವ್ಯಕ್ತಿಗಳ ಅರೆಸ್ಟ್..!

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪರೀಕ್ಷೆಯ ಪ್ರಮುಖ ಆರೋಪಿ ಆರ್ಡಿ ಪಾಟೀಲ್. ಈತನಿಗಾಗಿ ಪೊಲೀಸರು ಹಲವು ದಿನಗಳಿಂದ ಹುಡುಕಾಟ ನಡೆಸುತ್ತಿದ್ದರು.

ಈತನಿಗೆ ಫ್ಲ್ಯಾಟ್ ಮಾಲೀಕ ಮತ್ತು ಮ್ಯಾನೇಜರ್ ಓರ್ವ ರಕ್ಷಣೆ ನೀಡಿದ್ದರು ಎನ್ನಲಾಗಿತ್ತು. ಇವರಿಬ್ಬರನ್ನು ಸಹ ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಈ ಬೆನ್ನಲ್ಲೇ ಮಹಾರಾಷ್ಟ್ರಕ್ಕೆ ತೆರಳಿ ಪೊಲೀಸ್ರು ಪಾಟೀಲ್ನನ್ನು ಬಂಧಿಸಿದ್ದಾರೆ.

ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಬರ ಪರಿಹಾರ ಕೊಡಿ: ಕೇಂದ್ರಕ್ಕೆ ಡಿ ಕೆ ಶಿವಕುಮಾರ್ ಒತ್ತಾಯ

ಬೆಂಗಳೂರು: ರಾಜ್ಯದಲ್ಲಿ ಈ ವರ್ಷ ನೈರುತ್ಯ ಮುಂಗಾರು ಕೈಕೊಟ್ಟು ಬರ ಪರಿಸ್ಥಿತಿ ತೀವ್ರವಾಗಿದೆ. ಈಗಾಗಲೇ ಬರ ಪರಿಹಾರ ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಬರ ಪರಿಹಾರ ಬಿಡುಗಡೆ ಮಾಡಿ ಎಂದು ಕೇಂದ್ರ ಸರ್ಕಾರಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ಇಂದು ಮಾತನಾಡಿದ ಅವರು, ಬಿಜೆಪಿ – ಜೆಡಿಎಸ್ ನವರಿಗೆ ಅನುಕಂಪ ಬಂದು ಬರ ಅಧ್ಯಯನಕ್ಕೆ ಹೊರಟಿದ್ದಾರೆ. ಈಗಾಗಲೇ ಸರ್ಕಾರ ಉತ್ತಮ ಅಧ್ಯಯನ ನಡೆಸಿದೆ. ಕೇಂದ್ರ ಸರ್ಕಾರಕ್ಕೆ ವರದಿ ಕೊಡಲಾಗಿದೆ. ವರದಿಯನ್ನು ಸ್ವೀಕಾರ ಮಾಡಿದ ಕೇಂದ್ರ ಸರ್ಕಾರದ ಅಧ್ಯಯನಕ್ಕೆ ಅಧಿಕಾರಿಗಳನ್ನ ಕಳಿಸಿದರು. 26 ಸಂಸದರು, 19 ಜೆಡಿಎಸ್ ಶಾಸಕರು, 65 ಬಿಜೆಪಿ ಶಾಸಕರು ಪ್ರಧಾನಿಯವರನ್ನು ಭೇಟಿ ಮಾಡಲಿ ಎಂದರು.

ಬರದ ಹಿನ್ನಲೆಯಲ್ಲಿ ಸಂಬಂಧಿಸಿದ ಸಚಿವರನ್ನು ಭೇಟಿ ಮಾಡಿ ಪರಿಹಾರ ಹಣ ಕೊಡಿಸಬೇಕು. ಪ್ರಚಾರಕ್ಕಾಗಿ ಎರಡು ಗಿಡ ನೋಡಿಕೊಂಡು ಬಂದರೆ ಏನಿಲ್ಲ.

ನಾವು ಗಿಡಗಳನ್ನು ನೋಡಿದ್ದೇವೆ, ನಿಮ್ಮಿಂದ ರಾಜ್ಯಕ್ಕೆ ಏನಾಗಿದೆ? ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ನಿನ್ನೆ ಸಚಿವ ಸಂಪುಟದಲ್ಲಿ 800 ಕೋಟಿ ಬಿಡುಗಡೆ ಮಾಡಿದ್ದೇವೆ. ಕುಡಿಯುವ ನೀರಿನ, ಮೇವು, ಸೇರಿದಂತೆ ಎಲ್ಲದಕ್ಕೂ ಉಪಯೋಗ ಮಾಡಬೇಕು ಎಂದು ಹಣ ಕೊಟ್ಟಿದ್ದೇವೆ ಎಂದರು.

ಬರ ಪರಿಹಾರ ವಿಚಾರವಾಗಿ ಕೇಂದ್ರ ಸರ್ಕಾರ ಹಣ ಕೊಡಲಿಲ್ಲ ಎಂದರೂ, ನಮ್ಮ ಸರ್ಕಾರ ಕೊಡುವ ಬಗ್ಗೆ ಚಿಂತನೆ ನಡೆಸಿದೆ. ಆದರೆ ಕೇಂದ್ರ ಸರ್ಕಾರ ನಮ್ಮಿಂದ ಬರ ಪರಿಹಾರ ಕೊಡಲು ಆಗಲ್ಲ ಎಂದು ಹೇಳಬೇಕು ಎಂದು ಸವಾಲು ಹಾಕಿದರು.

ಬರದ ಹಿನ್ನಲೆಯಲ್ಲಿ ಸಂಬಂಧಿಸಿದ ಸಚಿವರನ್ನು ಭೇಟಿ ಮಾಡಿ ಪರಿಹಾರ ಹಣ ಕೊಡಿಸಬೇಕು. ಪ್ರಚಾರಕ್ಕಾಗಿ ಎರಡು ಗಿಡ ನೋಡಿಕೊಂಡು ಬಂದರೆ ಏನಿಲ್ಲ. ನಾವು ಗಿಡಗಳನ್ನು ನೋಡಿದ್ದೇವೆ, ನಿಮ್ಮಿಂದ ರಾಜ್ಯಕ್ಕೆ ಏನಾಗಿದೆ? ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಅವರು ಲಕ್ಷಗಳ ಮೌಲ್ಯದ ಸೂಟ್ ಧರಿಸುತ್ತಾರೆ, ನಾನು ಬಿಳಿ ಟಿ–ಶರ್ಟ್ ಧರಿಸುತ್ತೇನೆ: ರಾಹುಲ್ ಗಾಂಧಿ

ಭೋಪಾಲ್: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಪ್ರಧಾನಿ ಮೋದಿ ಲಕ್ಷಾಂತರ ರೂಪಾಯಿ ಮೌಲ್ಯದ ಸೂಟ್ ಗಳು, ಉಡುಪುಗಳನ್ನು ಧರಿಸುತ್ತಾರೆ. ಆದರೆ ನಾನು ಕೇವಲ ಈ ಬಿಳಿ ಟಿ–ಶರ್ಟ್ ನ್ನು ಧರಿಸುತ್ತೇನೆ ಎಂದು ಹೇಳಿದ್ದಾರೆ. ಸತ್ನಾದಲ್ಲಿ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, ನಾನು ಪ್ರಧಾನಿ ಮೋದಿ ಅವರ ಭಾಷಣ ಕೇಳಿದೆ. ಅವರು ಪ್ರತಿ ಭಾಷಣದಲ್ಲೂ ನಾನು ಒಬಿಸಿ ಸಮುದಾಯಕ್ಕೆ ಸೇರಿದವನು ಎಂದು ಹೇಳುತ್ತಿದ್ದರು. ಇದನ್ನೇ ಪದೇ ಪದೇ ಹೇಳುವ ಮೂಲಕ ಅವರು ಪ್ರಧಾನಿಯೂ ಆದರು. ಆದರೆ ಅವರು ದಿನಕ್ಕೆ ಕನಿಷ್ಠ 2 ಬಾರಿಯಾದರೂ ಲಕ್ಷಾಂತರ ರೂಪಾಯಿ ಮೌಲ್ಯದ ಸೂಟ್ ಧರಿಸುತ್ತಾರೆ. ಪ್ರಧಾನಿ ಮೋದಿ ಒಂದೇ ಬಟ್ಟೆಯನ್ನು ಪುನರಾವರ್ತಿಸಿರುವುದನ್ನು ನೀವು ಗಮನಿಸಿದ್ದೀರಾ? ನಾನು ಇದೊಂದು ಬಿಳಿ ಶರ್ಟ್ ಧರಿಸುತ್ತೇನೆ. ನಾನು ಜಾತಿ ಗಣತಿ ಬಗ್ಗೆ ಮಾತನಾಡಲು ಆರಂಭಿಸಿದ ಬೆನ್ನಲ್ಲೇ ಮೋದಿ ಅವರ ಭಾಷಣದಲ್ಲಿ ಜಾತಿ ಮಾಯವಾಗಿದೆ. ಈಗ ಪ್ರಧಾನಿ ಮೋದಿ ದೇಶದಲ್ಲಿ ಜಾತಿಯತೆ ಎಂಬುದು ಇಲ್ಲ ಎಂದು ಹೇಳಲು ಪ್ರಾರಂಭಿಸಿದ್ದಾರೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.

ಮಾಜಿ ರಾಜ್ಯಪಾಲ ಪಿ.ಬಿ. ಆಚಾರ್ಯ ಇನ್ನಿಲ್ಲ

ಉಡುಪಿ: ಮಾಜಿ ರಾಜ್ಯಪಾಲ ಪಿ.ಬಿ ಆಚಾರ್ಯ (92) ವಿಧಿವಶರಾಗಿದ್ದಾರೆ. ಮೂಲತಃ ಉಡುಪಿ ಜಿಲ್ಲೆಯವರಗಿರುವ ಪಿ.ಬಿ ಆಚಾರ್ಯಯವರು ಮಹಾರಾಷ್ಟ್ರದ ಮುಂಬೈಯಲ್ಲಿ ನಿಧನರಾಗಿದ್ದಾರೆ. ಇವರು ಮಣಿಪುರ, ನಾಗಾಲ್ಯಾಂಡ್, ಅರುಣಾಚಲ ಪ್ರದೇಶದಲ್ಲಿ ರಾಜ್ಯಪಾಲರಾಗಿದ್ದರು.

ಉಡುಪಿಯ ತೆಂಕಪೇಟೆಯ ಆಚಾರ್ಯ ಮಠದಲ್ಲಿ ಜನಿಸಿರುವ ಪಿ.ಬಿ ಆಚಾರ್ಯ ಅವರು ಈಶಾನ್ಯ ರಾಜ್ಯಗಳ ಅಭಿವೃದ್ಧಿಗೆ ಅವಿರತಶ್ರಮ ಪಟ್ಟಿದ್ದಾರೆ. ಆರ್ ಎಸ್ ಎಸ್ ಕಾರ್ಯಕರ್ತರಾಗಿಯೂ ಈಶಾನ್ಯ ಭಾರತದ ಮೂಲೆ ಮೂಲೆಯಲ್ಲಿ ಕೆಲಸ ಮಾಡಿದ್ದಾರೆ. ಸಾಮಾನ್ಯ ಜನರಿಗೆ ರಾಜಭವನ ಮುಕ್ತವಾಗಿ ತೆರೆದಿಟ್ಟವರಾಗಿದ್ದಾರೆ. ಅಲ್ಲದೆ ಬಡ ಮಕ್ಕಳನ್ನು ಶೈಕ್ಷಣಿಕವಾಗಿ ದತ್ತು ಪಡೆದು ಶಿಕ್ಷಣ ಕೊಡಿಸುತ್ತಿದ್ದರು.

ಪಾಕ್ ಸೇನೆ ಅಟ್ಟಹಾಸ: ಬಿಎಸ್ಎಫ್ ಯೋಧ ಹುತಾತ್ಮ

ಶ್ರೀನಗರ : ಜಮ್ಮು ಮತ್ತು ಕಾಶ್ಮೀರದ ರಾಮಗಢ ಸೆಕ್ಟರ್‌ನ ಅಂತಾರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ತಾನದ ಸೇನೆ ನಡೆಸಿದ ಅಪ್ರಚೋದಿತ ಗುಂಡಿನ ದಾಳಿಯಿಂದ ಬಿಎಸ್ಎಫ್ ಸಿಬ್ಬಂದಿಯೊಬ್ಬರು ಸಾವನ್ನಪ್ಪಿದ್ದಾರೆ. ಈ ವೇಳೆ ಭಾರತೀಯ ಸೇನೆ ಸ

ಅಪರಿಚಿತ ವ್ಯಕ್ತಿ ಸಾವು

ಬೆಳಗಾವಿ: ಬೆಳಗಾವಿ ರೈಲು ನಿಲ್ದಾಣದ ಹತ್ತಿರ ಇರುವ ಗೋವಾ ಬಸ್ಸ ನಿಲ್ದಾಣದ ಗೇಟ್ ಹತ್ತಿರ ನ.08, 2023 ಮೃತದೇಹ ದೊರಕಿದ್ದು, (25–30) ಶವದ ವಾರಸುದಾರರು ಯಾರು ಇಲ್ಲದೇ ಇರುವ ಕಾರನ ನ.10 2023 ವರೆಗೆ ಮೃತದೇಹವನ್ನು ಶವಾಗಾರದ ಇರಿಸಲಗುತ್ತದೆ.

ಚಹರೆ ಪಟ್ಟಿ: ಎತ್ತರ 5.4 ಇಂಚ, ಗೋಧಿ ಮೈ ಬಣ್ಣ, ಉದ್ದು ಮುಖ, ಅಗಲು ಮೂಗು, ನೀಲಿ ಬಣ್ಣದ ಟೀ ಶರ್ಟ ಗ್ರೇ ಬಣ್ಣದ ಟ್ರ್ಯಾಕ ಪ್ಯಾಂಟ್ ಧರಿಸಿರುತಾನೆ..

ಸದರಿ ವ್ಯಕ್ತಿ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ. ಮೃತಳ ರಕ್ತ ಸಂಬಂಧಿಗಳು ಯಾರಾದರೂ ಪತ್ತೆಯಾದರೆ ಬೆಳಗಾವಿ ಕ್ಯಾಂಪ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ: (0831) 2405234 ಅಥವಾ 0831–2405255 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕ್ಯಾಂಪ ಪೋಲಿಸ್ ಠಾಣೆ ಪೋಲಿಸ್ ಇನ್ಸಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹತ್ತನೇ ತರಗತಿಯ ವಿದ್ಯಾರ್ಥಿನಿ ಗರ್ಭಿಣಿ ಮಾಡಿದ ಆರೋಪಿ ಅರೆಸ್ಟ್

ಹಾಸನ: ಪ್ರೀತಿಸುವ ನಾಟಕವಾಡಿ ಅಪ್ರಾಪ್ತೆ ಮೇಲೆ ಅತ್ಯಾಚಾರವೆಸಗಿ ಆಕೆಯನ್ನು ಗರ್ಭಿಣಿಯನ್ನಾಗಿಸಿದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಜೀವನ್ (21) ಎಂದು ಗುರುತಿಸಲಾಗಿದೆ. ಆರೋಪಿ ಹತ್ತನೇ ತರಗತಿಯ ವಿದ್ಯಾರ್ಥಿನಿ ಒಬ್ಬಳ ಜೊತೆ ಸಲುಗೆಯಿಂದ ಇದ್ದ. ಈ ವೇಳೆ ಪ್ರೀತಿಸುವ ನಾಟಕವಾಡಿ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾನೆ. ಈಗ ವಿದ್ಯಾರ್ಥಿನಿ ಐದು ತಿಂಗಳ ಗರ್ಭಿಣಿಯಾದ ಬಳಿಕ ವಿಚಾರ ಬೆಳಕಿಗೆ ಬಂದಿದೆ. ಸಮಾಜಕ್ಕೆ ಹೆದರಿ ವಿದ್ಯಾರ್ಥಿನಿ ತನ್ನ ಮೇಲಾಗಿರುವ ದೌರ್ಜನ್ಯವನ್ನು ಯಾರ ಬಳಿಯೂ ಹೇಳಿಕೊಂಡಿರಲಿಲ್ಲ. ಈಗ ಆಕೆಯ ದೇಹದಲ್ಲಾದ ಬದಲಾವಣೆಯ ಬಳಿಕ ಆತಂಕಗೊಂಡ ವಿದ್ಯಾರ್ಥಿನಿ ತನ್ನ ಪೋಷಕರ ಬಳಿ ಹೇಳಿಕೊಂಡಿದ್ದಾಳೆ. ನಂತರ ಬಾಲಕಿಯ ಪೋಷಕರು ಹಾಸನ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಆರೋಪಿಯ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದ್ದು, ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಬೆಳಗಾವಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಶ್ರೀ.ಕೆ ವಿ ಪ್ರಭಾಕರ್ ಅವರಿಗೆ ಅಭಿಮಾನದ ಅಭಿನಂದನೆ ಸಮಾರಂಭ

ಬೆಳಗಾವಿ: ಮಾನ್ಯ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಶ್ರೀ ಕೆ ವಿ ಪ್ರಭಾಕರ್ ರವರನ್ನು ಮತ್ತು ಮುಖ್ಯಮಂತ್ರಿಗಳ ಮಾಧ್ಯಮ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಗಿರೀಶ್ ಕೋಟೆ, ಶ್ರೀ ಕೆ ಪಿ ಪುಟ್ಟಸ್ವಾಮಯ್ಯ, ಶ್ರೀ ಕೆ ಎಸ್ ನಾಗರಾಜ್, ಶ್ರೀ ದೀಪಕ ಕರಾಡೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವವರ ಮಾಧ್ಯಮ ಸಲಹೆಗಾರರಾದ ಶ್ರೀ ಎಂ ಕೆ ಹೆಗಡೆಯವರನ್ನೂ ಕೂಡ, ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿ ಈಗ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ, ಬೆಳಗಾವಿ ಪತ್ರಕರ್ತರಿಂದ ಅಭಿಮಾನದ ಅಭಿನಂದನೆ ಜರುಗಲಿದೆ.

ಕರ್ನಾಟಕ ಕಾರ್ನಿರತ ಪತ್ರಕರ್ತರ ಸಂಘದ ಬೆಳಗಾವಿ ಜಿಲ್ಲೆಯ ಘಟಕ ಮತ್ತು ವಿವಿಧ ಪತ್ರಿಕಾ ಸಂಘಗಳಿಂದ ಬೆಳಗಾವಿ ನಗರದಲ್ಲಿ ಶನಿವಾರ, ದಿನಾಂಕ 11–11–2023ರಂದು ನೆಹರು ನಗರದಲ್ಲಿರುವ ಕನ್ನಡ ಭವನದಲ್ಲಿ ಬೆಳಿಗ್ಗೆ 11ಕ್ಕೆ ನಡೆಯಲಿರುವ ಸಮಾರಂಭವು ಜಗದ್ಗುರುಗಳಾದ ಡಾ॥ ತೋಂಟದ ಸಿದ್ದರಾಮ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಸತೀಶ್

ಜಾರಕಿಹೋಳಿಯವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸಮಾರಂಭದಲ್ಲಿ ಪತ್ರಿಕಾ ವಿತರಕರಿಗೆ ಸೈಕಲ್ ವಿತರಣೆಯನ್ನು ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಾದ ಶ್ರೀ ಲಕ್ಷ್ಮೀ ಹೆಬ್ಬಾಳಕರ ವಿತರಣೆ ಮಾಡಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಡಾ.ಭೀಮಶಿ ಜಾರಕಿಹೋಳಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕರಾದ ಶ್ರೀ ಆಸೀಫ್ (ರಾಜು) ಶೇಠ, ಶ್ರೀ ಅಭಯ ಪಾಟೀಲ, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶ್ರೀ ಶಿವಾನಂದ ತಗಡೂರು, ಅತಿಥಿಗಳಾಗಿ ಶ್ರೀ ಬಿ ಸಿ ಲೋಕೇಶ್, ಶ್ರೀ ಎಚ್.ಬಿ.ಮದನಗೌಡ, ಶ್ರೀ ಪುಂಡಲೀಕ ಬಾಳೋಜಿ, ವಿಶೇಷ ಆಹ್ವಾನಿತರಾಗಿ ಜಿಲ್ಲಾಧಿಕಾರಿಗಳಾದ ಶ್ರೀ ನಿತೇಶ್ ಪಾಟೀಲ, ನಗರ ಪೋಲಿಸ್ ಆಯುಕ್ತರಾದ ಶ್ರೀ ಎಸ್ ಎನ್ ಸಿದ್ದರಾಮಪ್ಪ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಭೀಮಾಶಂಕರ್ ಗುಳೇದ, ವಾರ್ತಾ ಇಲಾಖೆಯ ಉಪನಿರ್ದೇಶಕರಾದ ಶ್ರೀ ಗುರುನಾಥ್ ಕಡಬೂರು, ಶ್ರೀಮತಿ ಶುಭಾ ರತ್ನಾಯಕ, ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀ ದಿಲೀಪಕುಮಾರ್ ಕುರುಂದವಾಡೆ ಹಾಗೂ ಹಲವಾರು ಸಂಘ ಸಂಸ್ಥಗಳು ಮತ್ತು ಜಿಲ್ಲೆಯ ಪತ್ರಕರ್ತ ಮಿತ್ರರು ಭಾಗವಹಿಲಿದ್ದಾರೆ.

ದೂರು ನೀಡಲು ಬಂದ ಮಹಿಳೆಯರ ಮುಂದೆಯೇ ಅರೆಬೆತ್ತಲಾಗಿ ಕುಳಿತ ಪೊಲೀಸ್ ಅಧಿಕಾರಿ

ಪೊಲೀಸ್ ಅಧಿಕಾರಿ ಠಾಣೆಯಲ್ಲಿ ದೂರು ಪಡೆಯುವ ವೇಳೆ ಬನಿಯನ್ ಮತ್ತು ಟವೆಲ್ ಸುತ್ತಿಕೊಂಡು ಅರೆಬೆತ್ತಲೆ ಸ್ಥಿತಿಯಲ್ಲಿ ಕಂಡುಬಂದಿದ್ದು, ಇಲಾಖೆ ಅವರನ್ನು ಸಸ್ಪೆಂಡ್ ಮಾಡಿ ತನಿಖೆಗೆ ಆದೇಶಿಸಿದೆ.

ಅಮಾನತಾದವರು ಕೌಶಂಬಿ ಜಿಲ್ಲೆಯ ಕೊಖ್ರಾಜ್ ಪೊಲೀಸ್ ಠಾಣೆ ವ್ಯಾಪ್ತಿಯ ಸಿಂಘಿಯಾ ಹೊರಠಾಣೆಯ ಅಧಿಕಾರಿ ರಾಮ್ ನಾರಾಯಣ್ ಸೋಂಕರ್ ಎಂದು ವರದಿಯಾಗಿದೆ.

ಮಹಿಳೆಯರು ಕೌಟುಂಬಿಕ ಕಲಹದ ವಿಚಾರವಾಗಿ ದೂರು ನೀಡಲು ಬಂದ ವೇಳೆ ಈ ಅಧಿಕಾರಿ ಸಮವಸ್ತ್ರ ಬಿಟ್ಟು ಬನಿಯನ್ ಮತ್ತು ಟವೆಲ್ ಸುತ್ತಿಕೊಂಡು ಕುಳಿತಿದ್ದರು.

ಅಲ್ಲದೇ ಅವರು ಅರೆಬೆತ್ತಲೆಯಲ್ಲಿ ಕುಳಿತು ಮಹಿಳೆಯರ ದೂರು ಆಲಿಸುತ್ತಿದ್ದರು. ಅಧಿಕಾರಿಯ ಅವಸ್ಥೆ ಕಂಡು ಮಹಿಳೆಯರು ಕೂಡ ದಿಗ್ಭ್ರಮೆಗೊಂಡಿದ್ದರು.

ಸದ್ಯ ಯಾರೋ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದು, ವಿಡಿಯೋ ವೈರಲ್ ಆಗಿದೆ.

ಮೇಲಾಧಿಕಾರಿಗಳು ರಾಮ್ ನಾರಾಯಣ್ ವಿರುದ್ಧ ಕ್ರಮ ಜರುಗಿಸಿದ್ದಾರೆ. ತಕ್ಷಣದಿಂದಲೇ ಜಾರಿಗೆ ಬರುವಂತೆ ಅವರನ್ನು ಹುದ್ದೆಯಿಂದ ಅಮಾನತು ಮಾಡಿ ತನಿಖೆ ನಡೆಸುವಂತೆ ಸೂಚಿಸಿದ್ದಾರೆ ಎಂದು ವರದಿಯಿಂದ ತಿಳಿದುಬಂದಿದೆ.

ಯಾದಗಿರಿ ಜಿಲ್ಲೆಯ ವಿವಿಧೆಡೆ ಬಿಜೆಪಿ ನಾಯಕರಿಂದ ಬರ ಅಧ್ಯಯನ: ಎಕರೆಗೆ 50 ಸಾವಿರ ಪರಿಹಾರ ನೀಡಲು ಬೆಲ್ಲದ ಆಗ್ರಹ

ಯಾದಗಿರಿ: ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ದಿನಗಳಲ್ಲಿ ಬರಗಾಲ ಆವರಿಸಿದೆ ಇಂತಹ ಬರಗಾಲ ಹಿಂದೆಂದೂ ಬ0ದಿರಲಿಲ್ಲ. ಬರಗಾಲದಿಂದಾಗಿ ರೈತರು ಸಂಪೂರ್ಣ ಬೆಳೆನಷ್ಟ ಅನುಭವಿಸಿ ತೀವ್ರ ಸಂಕಷ್ಟಕ್ಕೀಡಾಗಿರುವ ರೈತರ ಪ್ರತಿ ಎಕರೆಗೆ ರು.50 ಸಾವಿರ ಪರಿಹಾರ ನೀಡಬೇಕು ಎಂದು ಹುಬ್ಬಳ್ಳಿ ಧಾರವಾಡ ಶಾಸಕ ಅರವಿಂದ ಬೆಲ್ಲದ ಒತ್ತಾಯಿಸಿದರು. ರಾಜ್ಯ ಬಿಜೆಪಿಯಿಂದ ಹಮ್ಮಿಕೊಂಡಿರುವ ಬರ ಪರಿಶೀಲನೆ ಅಂಗವಾಗಿ ಶುಕ್ರವಾರ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ರಾಜ್ಯ ಸರಕಾರ ವರ್ಗಾವಣೆ ದಂಧೆಯನ್ನು ಕೈ ಬಿಟ್ಟು ರಾಜ್ಯದಲ್ಲಿ ಆವರಿಸಿದ ಬರ ಕುರಿತು ಗಮನಕೊಟ್ಟು ರೈತರ ಕಷ್ಟಗಳಿಗೆ ಸ್ಪಂದಿಸುವ ಕೆಲಸ ಮಾಡಬೇಕೆಂದು ವಾಗ್ದಾಳಿ ನಡೆಸಿದರು. ಬಿಜೆಪಿ ಪಕ್ಷದ ಮುಖಂಡರು ರಾಜ್ಯದಲ್ಲಿ ಬರ ಅಧ್ಯಯನ ಮಾಡಲು ಹೊರಟಾಗ ರಾಜ್ಯ ಸರಕಾರ ಎಚ್ಚೆತ್ತುಕೊಂಡು ರು.320 ಕೋಟಿ ಅನುದಾನ ಬಿಡುಗಡೆ ಮಾಡಿದೆ ಎಂದು ಲೇವಡಿ ಮಾಡಿದರು. ಈ ಪರಿಹಾರ ಸಾಕಾಗಲ್ಲ ಬಿಡುಗಡೆ ಮಾಡಿರುವ ಅನುದಾನ ರೈತರನ್ನು ಶೋಷಣೆ ಮಾಡುವಂತಿದೆ ಎಂದು ಟೀಕಿಸಿದ ಅವರು, ಕೇಂದ್ರ ಸರಕಾರದಿಂದ 6 ಸಾವಿರ ಮತ್ತು ಯಡಿಯೂರಪ್ಪನವರು ಮುಖ್ಯಮಂತ್ರಿ ಆಗಿದ್ದಾಗ ರೈತರಿಗೆ ಪ್ರತಿವರ್ಷ ನೀಡುತ್ತಿದ್ದ ರು.4 ಸಾವಿರ ನೆರವನ್ನು ಕಾಂಗ್ರೆಸ್ ಸರಕಾರ ಸ್ಥಗಿತ ಮಾಡಿ ರೈತ ವಿರೋಧಿ ನಿಲುವು ತಾಳಿದೆ ಎ0ದು ಗುಡುಗಿದರು.

ಯುವ ಮತದಾನ ಹೆಚ್ಚಾಗಲಿ: ಸಿಇಒ ಹರ್ಷಲ್ಬೊಯರ

ಬೆಳಗಾವಿ: ಎಲ್ಲ ಇಲಾಖೆಗಳಲ್ಲಿ ಮತದಾನದ ಕುರಿತು ವ್ಯಾಪಕ ಪ್ರಚಾರ ಕೈಗೊಂಡು ಬರುವ ಲೋಕಸಭಾಚುನಾವಣೆಯಲ್ಲಿ ಯುವಕರ ಮತದಾನ ಪ್ರಮಾಣ ಹೆಚ್ಚಳವಾಗುಂತೆ ನೋಡಿ ಕೊಳ್ಳುಬೇಕು ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ಹಾಹಕ ಅಧಿಕಾರಿಗಳಾದ ಹರ್ಷಲ್ಬೊಯರ ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ನವೆಂಬರ 10 ಶುಕ್ರವಾರ ಆಯೋಜಿಸಿದ್ದ ಲೋಕಸಭಾ ಚುನಾವಣೆಯ ಸ್ವೀಪ್ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯುವಕರಿಗೆ ಇಷ್ಟವಾಗುವ ಹಾಡುಗಳನ್ನು ರಚಿಸಿ, ಅವುಗಳನ್ನು ಪ್ರಸಾರ ಮಾಡುವದರೊಂದಿಗೆ ಲೋಕ ಸಭಾಚುನಾವಣೆಯಲ್ಲಿ ಯುವಕರ ಗಮನವನ್ನು ಲೋಕಸಭೆಯ ಮತದಾನದತ್ತ ಸೆಳೆಯಬೇಕೆಂದು ತಿಳಿಸಿದರು.

ಇಲಾಖೆವಾರು ವಾರಕ್ಕೆ ಒಂದು ವಿವಿಧ ಬಗೆಯ ವಿಶಿಷ್ಠವಾದ ಸ್ವೀಪ್ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕುಅದರಜೊತೆಗೆಕಾರ್ಯಕ್ರಮಗಳಧಾಖಲಾತಿಗಳನ್ನುಸಂಗ್ರಸಿಕೊಳ್ಳಬೇಕು.ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸೈಕಲ್ ಜಾಥಾ, ಭೈಕ್ಜಾಥಾ, ಅಂಧಮಕ್ಕಳ್ ಸೈಕಲ್ ಜಾಥಾ, ಚಿತ್ರಕಲಾಸ್ಪರ್ಧೆ, ರಂಗೋಲಿ ಸ್ಪರ್ಧೆಸೇರಿದತೆ ಇತರ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಮತದಾನವನ್ನು ಹೆಚ್ಚಿಸ ಬೇಕೆಂದು ಹೇಳಿದರು

ಲೋಕಸಭಾ ಚುನಾವಣೆಯ ಐ.ಎ.ಎಸ್ .ಪ್ರೊಬೇಷನರಿ ಅಧಿಕಾರಿಗಳಾದ ಶುಭಂ ಶುಕ್ಲಾ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದರ ವಿಬಂಗಾರಪ್ಪನವರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ನಾಗರಾಜ ಆರ್, ಯುವ ಸಭಲೀಕರಣ ಹಾಗೂ ಕ್ರೀಡಾ ಇಲಾಖೆಯ ಉಪನಿರ್ದೇಶಕರಾದ ಬಿ. ಶ್ರೀನಿವಾಸ, ಜಿಲ್ಲಾ ಐಇಸಿ ಸಂಯೋಜಕ ಪ್ರಮೋದಗೊಡೆಕರ, ಎಸ್ .ಬಿ.ಎಮ್ಬಾ ಹುಬಲಿ ಮೆಳವಂಕಿ, ತಾಐಇಸಿ ಸಂಯೋಜಕ ರಮೇಶ ಮಾದರ, ದತ್ತಾ ಚವ್ಹಾನ ಸೇರಿತಂದತೆ ಇತರ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು

ಅಪ್ರಾಪ್ತೆ ಮೇಲೆ ಲೈಗಿಂಕ್ ದೌರ್ಜನ್ಯ

ಮಂಡ್ಯ: 17 ವರ್ಷದ ಅಪ್ರಾಪ್ತೆಯ ಮೇಲೆ ಮೂವರು ಲೈಗಿಂಕ್ ದೌರ್ಜನ್ಯ ಎಸಗಿರುವ ಆಘಾತಕಾರಿ ಘಟನೆ ಮಂಡ್ಯದ ಮದ್ದೂರು ಪಟ್ಟಣ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಅಪ್ರಾಪ್ತೆಯನ್ನು ಸಹಪಾಠಿಗಳೇ ಪುಸಲಾಯಿಸಿ ಕರೆತಂದು ಕೃತ್ಯ ಎಸಗಿರುವ ಶಂಕೆ ವ್ಯಕ್ತವಾಗಿದೆ. ಕಿರಾತಕರು ಸಾಮೂಹಿಕ ಲೈಗಿಂಕ್ ದೌರ್ಜನ್ಯ ಮಾಡಿದ್ದಲ್ಲದೇ ಕೃತ್ಯದ ವೀಡಿಯೋ ಮಾಡಿದ್ದಾರೆ. ವೀಡಿಯೋ ವೈರಲ್ ಆದ ಬಳಿಕ ಘಟನೆ ಬೆಳಕಿಗೆ ಬಂದಿದೆ. ಇದೀಗ ಪೊಲೀಸರು ಮೂವರು ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಪುನೀತ್, ಮಂಜುನಾಥ್ ಹಾಗೂ ಸಿದ್ದರಾಜು ಬಂಧಿತ ಆರೋಪಿಗಳು. ಮೂವರು ಕೂಡಾ ಮದ್ದೂರು ತಾಲೂಕಿನವರಾಗಿದ್ದು, ಸಂತ್ರಸ್ತೆಯ ತಂದೆ ನೀಡಿದ ದೂರಿನ ಆಧಾರದ ಮೇಲೆ ಅವರನ್ನು ಬಂಧಿಸಲಾಗಿದೆ.

ಪ್ರಕರಣದ ಎ1 ಆರೋಪಿ ಪುನೀತ್ ಮೈಸೂರಿನ ಯುವ ದಸರಾದಲ್ಲಿ ಸಂತ್ರಸ್ತೆಯನ್ನು ಪರಿಚಯ ಮಾಡಿಕೊಂಡಿದ್ದ. ಆಕೆಯನ್ನು ಪ್ರೀತಿಸುತ್ತಿರುವುದಾಗಿ ನಂಬಿಸಿ ಸಲುಗೆ ಬೆಳೆಸಿದ್ದ. ಬಳಿಕ ನವೆಂಬರ್ 4 ರಂದು ಮದ್ದೂರಿನ ಲಾಡ್ಜ್‌ಗೆ ಕರೆದುಕೊಂಡು ಹೋಗಿ ಸಾಮೂಹಿಕ ಲೈಗಿಂಕ್ ದೌರ್ಜನ್ಯ ಎಸಗಿದ್ದಾರೆ. ಈ ವೇಳೆ ಕಿರಾತಕರು ಕೃತ್ಯದ ವೀಡಿಯೋವನ್ನು ಕೂಡಾ ಮಾಡಿದ್ದಾರೆ. ಬಳಿಕ ಸಂತ್ರಸ್ತೆಯ ಮೊಬೈಲ್‌ಗೆ ವೀಡಿಯೋವನ್ನು ಕಳುಹಿಸಿ ಬೆದರಿಕೆ ಹಾಕಿದ್ದಾರೆ. ಮಾತ್ರವಲ್ಲದೇ ಕರೆದಾಗಲೆಲ್ಲಾ ಬರುವಂತೆ ಬ್ಲ್ಯಾಕ್‌ಮೇಲ್ ಮಾಡಿದ್ದಾರೆ.

ಇದಾದ ಬಳಿಕ ಅಪ್ರಾಪ್ತೆ ನಡೆದ ಘಟನೆ ಬಗ್ಗೆ ತನ್ನ ಪೋಷಕರ ಬಳಿ ಹೇಳಿಕೊಂಡಿದ್ದಾಳೆ. ನಂತರ ಆಕೆಯ ಪೋಷಕರು ಪೊಲೀಸರಿಗೆ ದೂರು ನೀಡಿದ್ದು, ಇದರ ಅನ್ವಯ ಮೂವರನ್ನು ಬಂಧಿಸಿದ್ದಾರೆ. ಅತ್ಯಾಚಾರ, ಪೋಕ್ಸೊ, ಆಟ್ರಾಸಿಟಿ ಸೆಕ್ಷನ್ ಅಡಿ ಕೇಸ್ ದಾಖಲಿಸಲಾಗಿದೆ.

ದೇವಸ್ಥಾನದ ಹುಂಡಿಯನ್ನೇ ದೋಚಿದ ಖದೀಮರು

ಬೀದರ್: ದೇವರಿಗೆ ಕೈ ಮುಗಿದು, ದೇವಸ್ಥಾನದ ಹುಂಡಿ ದೋಚಿ ಕಳ್ಳರು ಪರಾರಿಯಾಗಿರುವ ಘಟನೆ ಬೀದರ್ಜಿಲ್ಲೆಯ ಚಿಟಗುಪ್ಪಾ ತಾಲೂಕಿನ ಉಡಬಾಳ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಯಲ್ಲಮ್ಮ ದೇವಸ್ಥಾನದಲ್ಲಿ ಕಳ್ಳರು ಕೈಚಳಕ ತೋರಿದ್ದಾರೆ. ಮುಖಕ್ಕೆ ಟವೆಲ್, ಮಾಸ್ಕ್ ಹಾಕಿಕೊಂಡು ಬಂದು ಹುಂಡಿ ಹೊತ್ತೊಯ್ದಿದ್ದಾರೆ. ಕಳ್ಳತನದ ದೃಶ್ಯ ದೇವಸ್ಥಾನದಲ್ಲಿ ಆಳವಡಿಸಿದ್ದ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಸ್ಪ್ಯಾನರ್ ಬಳಸಿ ಖದೀಮರು ಕೀಲಿ ಮುರಿಯಲು ಪ್ರಯತ್ನಿಸಿದ್ದಾರೆ. ಕೀಲಿ ಮುರಿಯದ ಪರಿಣಾಮ ಹುಂಡಿಯನ್ನೇ ಹೊತ್ತೊಯ್ದಿದ್ದಾರೆ.

ಹುಂಡಿಯಲ್ಲಿ ಹಣವನ್ನು ದೋಚಿ, ದೇವಸ್ಥಾನದ ಬಳಿಯ ಗುಡ್ಡದಲ್ಲಿ ಹುಂಡಿ ಎಸೆದು ಹೋಗಿದ್ದಾರೆ. ಹುಂಡಿ ಹೊತ್ಯೊಯ್ಯುವ ದೃಶ್ಯ ಸಿಸಿಟಿವಿಯಲ್ಲೆ ಸೆರೆಯಾಗಿದೆ. ಸಾಮಾಜಿಕ ಜಾಲತಾಣದಲ್ಲಿ ವೀಡಿಯೋ ವೈರಲ್ ಆಗಿದ್ದು, ಚಿಟಗುಪ್ಪಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕ್ಯೂಟ್' ಆಟೋ–ಟ್ಯಾಕ್ಸಿ ಬಿಡುಗಡೆ

ಬೆಳಗಾವಿ: ಭರವಸೆ ಎ0ದರೆ ತಿತಿತಿ ಕಂಪನಿಯಾಗಿದೆ. ಅಂದಾಜು 75 ಲಕ್ಷ ಜನರ ಆರ್ಥಿಕ ಮೂಲವಾಗಿ ಬಜಾಜ್ ಆಟೋಗಳು ಕಾರ್ಯನಿರ್ವಹಿಸುತ್ತಿವೆ. ಎಂದು ಬಜಾಜ್ ಕಂಪನಿಯ ವಿಭಾಗೀಯ ವ್ಯವಸ್ಥಾಪಕ ರಾಘವೇಂದ್ರ ಎ. ತಿಳಿಸಿದರು. ನಗರದ ಹೋಟೆಲ್ ವೊಂದರಲ್ಲಿ ಗುರುವಾರ ನಡೆದ ಬಜಾಜ್ ಕಂಪನಿಯ 'ಕ್ಯೂಟ್' ಆಟೋ–ಟ್ಯಾಕ್ಸಿ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, "ಬೆಂಗಳೂರಿನಂತೆ ಬೆಳಗಾವಿ ಬೆಳೆಯುತ್ತಿರುವ ಪ್ರದೇಶವಾಗಿದೆ. ಇಲ್ಲಿನ ವಾತಾವರಣಕ್ಕೆ ಹೊಂದಿಕೊಳ್ಳುವ ಮತ್ತು ಆರ್ಥಿಕವಾಗಿ ಸಹಕಾರಿಯಾಗಲಿರುವ 202529 ಕಂಪನಿಯ ಆಟೋ–ಟಾಕಿ ಮಾರಾಟ ಮಳಿಗೆಗಳನ್ನು ರಾಜ್ಯದ 4 ಕಡೆಗಳಲ್ಲಿ ಮಾತ್ರ ನೀಡಲಾಗಿದೆ.

ಆಟೋ– ಟ್ಯಾಕ್ಸಿ ನಡುವೆ ಬಹಳಷ್ಟು ವ್ಯತ್ಯಾಸವಿದೆ. ಆಟೋ ಖರೀದಿಸಿ, ಬೆಳಗಾವಿಯ ಹೋಟೆಲ್ ವೊಂದರಲ್ಲಿ ಬಜಾಜ್ ಕಂಪನಿಯ 'ಕ್ಯೂಟ್' ಆಟೋ–ಟ್ಯಾಕ್ಸಿಯನ್ನು ಗಣ್ಯರು ಬಿಡುಗಡೆಗೊಳಿಸಿದರು.

ಬೆಂಗಳೂರು, ಮಂಗಳೂರು, ಉಡುಪಿ: ಹಾಗೂ ಬೆಳಗಾವಿಯಲ್ಲಿ ಮಾತ್ರ ಮಾರಾಟ ಮಳಿಗೆಗಳಿಗೆ ಪರವಾನಗಿ ನೀಡಲಾಗಿದ್ದು, ಗ್ರಾಹಕರು ಕೇವಲ 3.65 ಲಕ್ಷ ರೂ.ಗಳಲ್ಲಿ ಕನಸಿನ ಆಟೋ

ಟ್ಯಾಕ್ಸಿ ತಮ್ಮದಾಗಿಸಿಕೊಳ್ಳಬಹುದು', ಕೋ– ಎಂದು ಹೇಳಿದರು. ಪೀರ್ಜಾದೆ ಆಟೋಮೊಬೈಲ್ ಮಾಲೀಕ

ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ತರಬೇತಿ ಕಾರ್ಯಕ್ರಮ

ವಿದ್ಯಾರ್ಥಿಗಳು ತರಬೇತಿಯ ಸದುಪಯೋಗ ಪಡೆದುಕೊಳ್ಳಿ: ಶಾಸಕ ಆಸೀಫ್ (ರಾಜು)

ಬೆಳಗಾವಿ: ಮಕ್ಕಳಲ್ಲಿ ತೋಟಗಾರಿಕೆ ಕುರಿತು ಆಸಕ್ತಿ ತರುವ ಹೊಸ ಪ್ರಯತ್ನಕ್ಕೆ ಸರ್ಕಾರ ಮುಂದಾಗಿದ್ದು, ಮಕ್ಕಳು ತೋಟಗಾರಿಕೆ ಬೆಳೆಗಳ ಮಾಹಿತಿ ಹೊಂದಬೇಕು. ವಿದ್ಯಾರ್ಥಿಗಳು ತರಬೇತಿಯ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಮನೆ, ಹಿತ್ತಲಲ್ಲಿ ತರಕಾರಿ, ಹೂವು, ಹಣ್ಣು ಸೇರಿದಂತೆ ವಿವಿಧ ತೋಟಗಾರಿಕೆ ಬೆಳೆಗಳನ್ನು ಬೆಳೆಯಬೇಕು ಎಂದು ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್ ಅವರು ತಿಳಿಸಿದರು.

ತೋಟಗಾರಿಕೆ ಇಲಾಖೆಯ ಹ್ಯೂಮ್ ಪಾರ್ಕ್ ನಲ್ಲಿ ಶುಕ್ರವಾರ (ನ.10) ನಡೆದ ಪ್ರಸಕ್ತ ಸಾಲಿನ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಸರ್ಕಾರಿ/ ಅನುದಾನಿತ ಪ್ರೌಢ ಶಾಲಾ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾಗಿದ್ದ, ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ವಿದ್ಯಾರ್ಥಿಗಳಿಗಾಗಿ ತೋಟಗಾರಿಕೆ ತರಬೇತಿ ನೀಡಲು ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದೆ. ವಿವಿಧ ತೋಟಗಾರಿಕೆ ಬೆಳೆಗಳ ಕುರಿತು ವಿದ್ಯಾರ್ಥಿಗಳು ಮಾಹಿತಿ ಪಡೆದುಕೊಳ್ಳಬೇಕು.

ಟೊಮೆಟೊ, ಈರುಳ್ಳಿ, ಕೊತ್ತಂಬರಿ ಸೊಪ್ಪಿನ ಬೆಲೆಗಳು ಗಗನಕ್ಕೇರಿವೆ ಇಂತಹ ಸಂದರ್ಭದಲ್ಲಿ ತಮ್ಮ ಮನೆ ಬಳಕೆಗೆ ತಾವು ಬೆಳೆದ ತರಕಾರಿಗಳು ಉಪಯೋಗಕ್ಕೆ ಬರಲಿವೆ. ಇನ್ನೂ ನೀವು ಬೆಳದ ತರಕಾರಿಗಳು ರಾಸಾಯನಿಕ ಸಿಂಪಡಣೆ ಇಲ್ಲದೆ ನೈಸರ್ಗಿಕವಾಗಿ ಬೆಳೆದ ತರಕಾರಿಗಳು ನಿಮ್ಮ ದಿನನಿತ್ಯದ ಆಹಾರ ವಾಗಲಿವೆ ಎಂದು ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್ ಅವರು ಸಲಹೆ ವಿದ್ಯಾರ್ಥಿಗಳಿಗೆ ನೀಡಿದರು.

ಸರ್ಕಾರದ ನಿರ್ದೇಶನದಂತೆ ಏರ್ಪಡಿಸಲಾದ ತೋಟಗಾರಿಕೆ ತರಬೇತಿಯ ಸದುಪಯೋಗ ಪಡೆದುಕೊಂಡು ಆಸಕ್ತ ವಿದ್ಯಾರ್ಥಿಗಳು ತೋಟಗಾರಿಕೆ ಕೃಷಿಯತ್ತ ಗಮನ ಹರಿಸಬೇಕು. ಮುಂದಿನ ದಿನಗಳಲ್ಲಿ ಡಾಕ್ಟರ್, ಇಂಜಿನಿಯರ್ ಕೋರ್ಸ್‌ಗಳನ್ನು ಸೇರುವದು ಮಾತ್ರವಲ್ಲದೆ ಕೃಷಿಯಲ್ಲಿ ಸಹ ಆಸಕ್ತಿ ಹೊಂದಿ ಕೃಷಿಗೆ ಸಂಬಂಧಿಸಿದ ಕೋರ್ಸ್‌ಗಳನ್ನು ಮಾಡಬೇಕು ಎಂದು ತೋಟಗಾರಿಕೆ ಉಪ ನಿರ್ದೇಶಕ ಮಹಾಂತೇಶ ಮುರಗೋಡ ಅವರು ತಿಳಿಸಿದರು.

ಮಿನಿ ಕಿಟ್ ವಿತರಣೆ:

ಶಾಸಕ ಆಸೀಫ್ (ರಾಜು) ಸೇಠ್ ಅವರು ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ "ವಿದ್ಯಾರ್ಥಿಗಳಿಗಾಗಿ ತೋಟಗಾರಿಕೆ" ಕಾರ್ಯಕ್ರಮದಲ್ಲಿ ಭಾಗವಹಿಸಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಮಿನಿ ಕಿಟ್ ವಿತರಣೆ ಮಾಡಿದರು. ಅದೇ ರೀತಿಯಲ್ಲಿ ಯೋಜನಾ ಅನುಷ್ಠಾನದ ಕುರಿತು ಮಾಹಿತಿ ಇರುವ ಕೈಪಿಡಿ ಬಿಡುಗಡೆ ಗೊಳಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಲೀಲಾವತಿ ಹಿರೇಮಠ, ಸರ್ಕಾರಿ ಸರ್ದಾರ ಹೈ ಸ್ಕೂಲ ಶಿಕ್ಷಕರಾದ ರವಿ ಕಲಕರಣಿ, ಬಿನಾ.ಆರ್, ಎಂ. ಎ ಡಾಂಗಿ, ತೋಟಗಾರಿಕಾ ಸಂಘದ ಗೌರವ ಕಾರ್ಯದರ್ಶಿ ಲಿಂಗಡೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಸರ್ದಾರ್ ಸರ್ಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳು ತರಬೇತಿಯಲ್ಲಿ ಪಾಲ್ಗೊಂಡಿದ್ದರು.

ವಿದ್ಯಾರ್ಥಿಗಳು ತೋಟಗಾರಿಕೆ ಕ್ಷೇತ್ರದಲ್ಲೇ ಸ್ವಯಂ ಪ್ರೇರಣೆಯಿಂದ ಮುಂದುವರೆಯುವುದು ಯೋಜನೆಯ ಆಶಯವಾಗಿದೆ. ಶಾಲಾ ಮಕ್ಕಳಿಗೆ ಈ ನಿಟ್ಟಿನಲ್ಲಿ ವಿಷಯಾಧಾರಿತ ತರಬೇತಿಗಳನ್ನು ನೀಡಲಾಗುವುದು, ಮುಂಬರುವ ದಿನಗಳಲ್ಲಿ ಅವರು ತೋಟಗಾರಿಕೆ ಕ್ಷೇತ್ರದಲ್ಲೇ ಮುಂದುವರಿಯಲು ಪ್ರೇರೇಪಣೆ ನೀಡಿದಂತಾಗುತ್ತದೆ ಎಂದು ತಿಳಿಸಿದರು.

ಮನೆಯಲ್ಲಿ ಬೆಳೆದ ಹಣ್ಣು ಮತ್ತು ತರಕಾರಿಗಳಲ್ಲಿ ಖನಿಜಾಂಶ, ಜೀವಸತ್ವ, ಸೂಕ್ಷ್ಮ ಪೋಷಕಾಂಶಗಳನ್ನು ಹೊಂದಿರುವುದರಿಂದ ಸಮತೋಲನ ಆಹಾರ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಹಾಗಾಗಿ ಮಕ್ಕಳು ಇಂತಹ ಆಹಾರ ಬೆಳಸಿ ಸೇವಿಸಬೇಕು ಮತ್ತು ಇಂತಹ ಬೇಳಗಳ ಕುರಿತು ಇತರರಿಗೂ ತಿಳಿಸಿಕೊಡಬೇಕು ಎಂದು ತೋಟಗಾರಿಕೆ ಉಪ ನಿರ್ದೇಶಕ ಮಹಾಂತೇಶ ಮುರಗೋಡ ಅವರು ಹೇಳಿದರು.

ಸ್ಪಂದನ ಆಸ್ಪತ್ರೆ, ಸುರೇಶ ಯಾದವ ಫೌಂಡೇಶನ್ ದಿಂದ ಉಚಿತ ಅರೋಗ್ಯ ತಪಾಸಣೆ ಶಿಬಿರ ಉದ್ಘಾಟನೆ

ಮನುಷ್ಯನಿಗೆ ಆರೋಗ್ಯ ಸಂಪತ್ತು ಮುಖ್ಯ: ಸುರೇಶ ಯಾದವ

ಬೆಳಗಾವಿ: "ಎಲ್ಲಾ ಸಂಪತ್ತುಗಳಿಗಿಂತ ಆರೋಗ್ಯ ಸಂಪತ್ತು ಇಂದು ಮನುಕುಲಕ್ಕೆ ಮುಖ್ಯವಾಗಿದೆ. ನಗರ ಸುತ್ತಮುತ್ತಲಿನ ನಿವಾಸಿಗಳು ಈ ಉಚಿತ ಆರೋಗ್ಯ ತಪಾಸಣೆ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು "ಎಂದು ಸುರೇಶ ಯಾದವ ಫೌಂಡೇಶನ್ ಅಧ್ಯಕ್ಷರಾದ ಸುರೇಶ ಯಾದವ ಅವರು ಹೇಳಿದರು.

ಇಲ್ಲಿನ ರಾಮತೀರ್ಥ ನಗರದ ಸಮುದಾಯ ಭವನದಲ್ಲಿ ಸ್ಪಂದನ ಸುಪರ ಸ್ಪೆಶಾಲಿಟಿ ಹಾಸ್ಪಿಟಲ್ ಹಾಗೂ ಸುರೇಶ ಯಾದವ ಫೌಂಡೇಶನ್ ಮತ್ತು ರಾಮತೀರ್ಥ ನಗರ ರಹವಾಸಿಗಳ ಸಂಯುಕ್ತ ಆಶ್ರಯದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಅವರು ನೀಡಿ ಅವರು ಮಾತನಾಡಿದರು.

ಜನತೆ ಕಷ್ಟದ ಬದುಕು ಸಾಗಿಸುತ್ತಿರುವುದನ್ನು ಮನಗಂಡ ನಾವು, ಸ್ಪಂದನ ಆಸ್ಪತ್ರೆಯ ವೈದ್ಯರ ಜತೆ ಸುರೇಶ ಯಾದವ ಫೌಂಡೇಶನ್ ಕೈ ಜೋಡಿಸಿ ನಿಮ್ಮ ಸಮಸ್ಯೆ ಆಲಿಸಲು ಬಂದಿದ್ದೆವೆ.

ನಿವಾಸಿಗಳು ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಉಚಿತ ತಪಾಸಣೆ ಶಿಬಿರಗಳ ಮೂಲಕ ಆರೋಗ್ಯ ರಕ್ಷಣೆಯ ಮಹತ್ವವನ್ನು ತಿಳಿಸಿಕೊಡಬೇಕಾಗಿದೆ ಎಂದು ತಿಳಿಸಿದರು.

ನಿವಾಸಿಗಳ ಆರೋಗ್ಯ ಸೇವೆಗಳಿಗೆ ನಾನು ವೈಯುಕ್ತವಾಗಿ ದುಡಿಯಲು ಸದಾ ಸಿದ್ಧ, ಬಡಜನರ ಆರೋಗ್ಯ ರಕ್ಷಣೆಗೆ ಸೇರಿದಂತೆ ನಿಮ್ಮ ಕಷ್ಟಗಳಲ್ಲಿ ಸುರೇಶ ಯಾದವ ಫೌಂಡೇಶನ್ ಹಗಲಿರುಳು ಶ್ರಮಿಸುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸುರೇಶ ಯಾದವ ಅವರು ರಾಮತೀರ್ಥ ನಗರದ ಮತ್ತು ಸುತ್ತಮುತ್ತಲಿನ ಹಿರಿಯ ನಾಗರಿಕರ ಅರೋಗ್ಯದ ಬಗ್ಗೆ ಸ್ಪಂದನ ಆಸ್ಪತ್ರೆಯ ವರನ್ನು ಸಂಪರ್ಕಿಸಿದಾಗ ಅವರು ಸಂತೋಷದಿಂದ ಒಪ್ಪಿ ಕ್ಯಾಂಪ್ಗೆ ಬಂದಿರುವುದು ಬಹಳ ಖುಷಿ ಆಗಿದೆ ಆಟೋನಗರ, ರಾಮತೀರ್ಥ ನಗರ ಮತ್ತು ಸುತ್ತಮುತ್ತಲಿನ ಸುಮಾರು 100 ಕ್ಕಿಂತ ಹೆಚ್ಚು ಜನರು ಉಚಿತ ತಪಾಸಣೆಯ ಉಪಯೋಗ ತೆಗೆದುಕೊಂಡರು.

ಸ್ಪಂದನ ಆಸ್ಪತ್ರೆಯ ವೈದ್ಯರಾದ ಸಚಿನ ಪಾಟಿಲ ಅವರ ತಂಡವು ಮದುಮೇಹ, ರಕ್ತದೊತ್ತಡ, ಇ, ಸಿ, ಜಿ, ಹೃದಯ ರೋಗ ಚಿಕಿತ್ಸೆ, ಸ್ತ್ರೀರೋಗ ಮತ್ತು ಪ್ರಸುತಿ ಚಿಕಿತ್ಸೆಯನ್ನು ಮಾಡಿದರು. ಡಾ. ಸಚೀನ್ ಚಿಕಿತ್ಸೆ ರೋಗಿಗಳು ಅಪಾರ ಮೆಚ್ಚುಗೆ ವ್ಯಕ್ತಪಡಿಸಿದರು.

ಡಾ: ಸುಭಾಸ ಪಾಟೀಲ ಅವರ ವೈದ್ದರ ತಂಡವು ಉಚಿತ ಕ್ಯಾಂಪ್ ನಡೆಸಿಕೊಟ್ಟರು. ಡಾ .ಸುಭಾಸ ಪಾಟೀಲ ಅವರು ಅರೋಗ್ಯದ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು.

ಡಾ:ವಿಜಯಕುಮಾರ ನಿಡಗುಂದಿ, ಡಾ.ಲುಬಾ ಲಾಹೋರಿ, ನಿಖಿತಾ ಅಂಗಡಿ, ಸಿದ್ದಯ್ಯ ಗಣಾಚಾರಿ, ನಿಖಿತಾ ಡಿಸೋಜ, ಡಾ :ಐಶ್ವರ್ಯ, ಸಂದೀಪ, ನಿರ್ವಾಣಿ, ಸುರೇಶ ಊರಬೀನಟ್ಟಿ, ಮಲ್ಲಾರ್ ದೀಕ್ಷಿತ, ಸಾಗರ ಕಿಣೆಕರ, ಅಭಿಷೇಕ್, ಅಕ್ಷಯ, ಶ್ರೀಶೈಲ, ಸ್ನೇಹಲ ಬೆಳ್ಳಿ ಮುಂತಾದವರು ಉಪಸ್ಥಿತರಿದ್ದರು

ಚಲಿಸುತ್ತಿದ್ದ ವೇಳೆ ಸ್ಟೇರಿಂಗ್ ಕಿತ್ತು ಕಂದಕಕ್ಕೆ ಉರುಳಿದ ಸರ್ಕಾರಿ ಬಸ್

ಯಾದಗಿರಿ: ಚಲಿಸುತ್ತಿದ್ದ ಸಾರಿಗೆ ಬಸ್ಸ ಸ್ಟೇರಿಂಗ್ ಕಿತ್ತು ಬಂದ ಘಟನೆ ಯಾದಗಿರಿ ಜಿಲ್ಲೆಯ ವಡಗೇರಾ ಪಟ್ಟಣದ ಹೊರವಲಯದಲ್ಲಿ ನಡೆದಿದೆ. ಪರಿಣಾಮ ಬಸ್ ರಸ್ತೆ ಬದಿಯ ಕಂದಕಕ್ಕೆ ಹೋಗಿ ಉರುಳಿದೆ.

ಏಕಾಏಕಿ ಬಸ್ ಸ್ಟೇರಿಂಗ್ ಚಾಲಕನ ಕೈಗೆ ಬಂದಿದೆ. ಕೂಡಲೇ ಸಮಯ ಪ್ರಜ್ಞೆ ಮೆರೆದ ಬಸ್ ಚಾಲಕ ಭಾರೀ ದೊಡ್ಡ ದುರಂತವನ್ನು ತಪ್ಪಿದ್ದಾನೆ. ಹೀಗಗಿ 100ಕ್ಕೂ ಹೆಚ್ಚು ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

'ಸಿದ್ದಗಂಗಾ ಸೇವಾ ರತ್ನ' ಪ್ರಶಸ್ತಿಗೆ ಪ್ರಭಾ ಭಾಜನ

ಬೆಳಗಾವಿ: ಶಿಕ್ಷಕಿ ಪ್ರಭಾ ಬಾಳಕೃಷ್ಣ ಬೋರಗಾಂವಕರ ಅವರ ಸಾಹಿತ್ಯ ಸೇವೆ ಪರಿಗಣಿಸಿ ಅವರಿಗೆ "ಸಿದ್ದಗಂಗಾ ಸೇವಾ ರತ್ನ" ಪ್ರಶಸ್ತಿ ನೀಡಲಾಗಿದೆ.

ಕವಯಿತ್ರಿ , ಲೇಖಕಿ, ಅನುವಾದಕರಾಗಿ ತಮ್ಮ ಸಾಹಿತ್ಯ ಕೃಷಿಯನ್ನು ಮುಂದುವರೆಸಿಕೊಂಡು ಹೋಗುತ್ತಿದ್ದು, ಅವರ ಸಾಹಿತ್ಯ ಸೇವೆ ಗುರುತಿಸಿ ಮಂಡ್ಯದ ಕರುನಾಡು ಸೇವಾ ಸಂಸ್ಥೆಯು" ಸಿದ್ದಗಂಗಾ ಸೇವಾ ರತ್ನ ಪ್ರಶಸ್ತಿ" ಗೆ ಆಯ್ಕೆ ಮಾಡಿದೆ.

ತುಮಕೂರಿನ ಗುರುಕುಲ ಕಲಾ ಪ್ರತಿಷ್ಠಾನವೂ "ಗುರುಕುಲ ವಿದ್ಯಾ ರತ್ನ" ಪ್ರಶಸ್ತಿಗೆ ಆಯ್ಕೆ ಮಾಡಿದ್ದು ಇವರು ಸಾಹಿತ್ಯ ಕ್ಷೇತ್ರದಲ್ಲಿ ಮಾಡಿದ ಅನುಪಮ ಸೇವೆಗೆ ಸಾಕ್ಷಿಯಾಗಿವೆ.

ಇದೇ ತಿಂಗಳು ಮೈಸೂರಿನಲ್ಲಿ ಹಾಗೂ ಹಂಪಿಯಲ್ಲಿ ನಡೆಯುವ ಅಖಿಲ ಭಾರತ 3ನೇ ಗುರುಕುಲ ಕಲಾ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರತಿಷ್ಠಾನವು ತಿಳಿಸಿದೆ. ಈಗಾಗಲೇ ಅನೇಕ ಕೃತಿಗಳನ್ನು ರಚಿಸಿ ಹಲವಾರು ಪ್ರಶಸ್ತಿಗಳನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ. ಈ ಸಂದರ್ಭದಲ್ಲಿ ಅವರನ್ನು ಪ್ರತಿಷ್ಠಾನ ಕುಟುಂಬದವರು, ಸ್ನೇಹಿತರು ಅಭಿನಂದಿಸಿದ್ದಾರೆ.

ವ್ಯಕ್ತಿ ನಾಪತ್ತೆ

ಬೆಳಗಾವಿ: ಬೆಳಗಾವಿಯ ಸಾಯಿ ಶ್ರದ್ಧಾ ಕಾಲೋನಿಯ ಬಾಳಾಸಾಹೇಬ ವಸಂತ ಅವರ ಮನೆಯಲ್ಲಿ ವಾಸವಗಿದ ಸೌರಭ ಸಿದ್ದೇಶ್ವರ ಭೋಸಲೆ (23) ಇವನು ಸೆ 30, 2023 ರಂದು ಬೆಳಿಗ್ಗೆ 9.30 ಕ್ಕೆ ಮಾರರಾಷ್ಟ್ರದ ಸೊಲಾಪುರ ಜಿಲ್ಲಾಯ ಸಾ.ಖಿವಸಪೂರ ಹೋಗುತ್ತೇನೆ ಎಂದು ಹೇಳಿ ಅಲ್ಲಿಯು ಹೋಗದೆ ಮರಳಿ ಬಂದಿಲ್ಲ ಎಂದು ಬಾಳಾಸಾಹೇಬ ವಸಂತ ದೂರು ನೀಡಿದ್ದಾರೆ.

ಕಾಣೆಯಾದ ಯುವಕನ ಚಹರೆ ಪಟ್ಟಿ: ಎತ್ತರ 5–6 ಫೂಟ, ಗೋಧಿಗೆಂಪು ಮೈ ಬಣ್ಣ, ಸಾಧಾರಣ ಮೈಕಟ್ಟು ಹಾಗೂ ಕ, ಹಿಂದಿ,ಮರಾಠಿ ಭಾಷೆ ಮಾತನಾಡುತ್ತಾರೆ ಮತ್ತು ಕಪ್ಪು ಬಣ್ಣದ ಫುಲ್ ಶರ್ಟ ಹಾಗೂ ಬ್ಲೂ ಜೀನ್ಸ ಬಣ್ಣದ ಜೀನ್ಸ ಪ್ಯಾಂಟ ಧರಿಸಿದ್ದಾನೆ. ಸದರಿ ವ್ಯಕ್ತಿ ಬಗ್ಗೆ ಮಾಹಿತಿ ದೊರೆತಲ್ಲಿ ತಿಲಕವಡಿ ಪೊಲೀಸ್ ಠಾಣೆ ದೂರವಾಣಿ ಸಂ.0831–2405236, ಪೊಲೀಸ್ ಇನ್ಸಪೆಕ್ಟರ್ ತಿಲಕವಡಿ 9480804052 ತಿಲಕವಡಿ ಪಿಎಸ್ 9480804112 ಅಥವಾ ಬೆಳಗಾವಿ ಪೊಲೀಸ ಕಂಟ್ರೋಲ ರೂಮ 0831–2405231/2405255 ಗೆ ಸಂಪರ್ಕಿಸಬಹುದು ಎಂದು ತಿಲಕವಾಡಿ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಕ್ತದಾನ ಮಾಡಿರಿ ಸಾರ್ಥಕತೆ ಮೆರೆಯಿರಿ: ಎಂ.ಆರ್.ಮುಂಜಿ

ಬೆಳಗಾವಿ: ರಕ್ತದಾನದ ಶಿಬಿರಕ್ಕೆ ಅರ್ಥಬರಬೇಕಾದರೆ, ರಕ್ತವನ್ನು ದೇಶದ ಗಡಿ ಕಾಯುವ ಸೈನಿಕರಿಗೆ ಅನಾರೋಗ್ಯ ವಿದ್ದಾಗ ಅವರ ದೇಹದಲ್ಲಿ ತೂರಿಬಿಡಿ ಬದುಕಿ ಬಂದು ದೇಶ ರಕ್ಷಣೆ ಮಾಡಲಿ, ಆಸ್ಪತ್ರೆಯಲ್ಲಿರುವ ರೋಗಿಗಳಿಗೆ ತೂರಿ ಬೀಡಿ ಬದುಕಿ ಬಂದು ಸಮಾಜ ಸೇವೆ ಮಾಡಬೇಕು ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ .ಎಂ.ಆರ್.ಮುಂಜಿ ಅವರು ಕಾರ್ಯಕ್ರಮ ಚಾಲನೆ ನೀಡಿ ಮಾತನಾಡಿದರು .

ವಾಯುವ್ಯ ಕರ್ದಾಟಕ ರಸ್ತೆ ಸಾರಿಗೆ ಸಂಸ್ಥೆಯ ಚಿಕ್ಕೋಡಿಯ ವಿಭಾಗಿಯ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಭಾಗೀಯ ಕನ್ನಡ ಪ್ರಿಯಾ ಸಮಿತಿ ಆದರ್ಶ ಬ್ಲಡ್ ಬ್ಯಾಂಕ್ ಚಿಕ್ಕೋಡಿ, ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ನ.04 2023 ರಂದು ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.

ರಕ್ತವನ್ನು ಅಪಘಾತದ ಚಾಲಕ & ನಿರ್ವಾಹಕರ ದೇಹದಲ್ಲಿ ತೂರಿ ಬಿಡಿ ಬದುಕಿ ಬಂದು ಸಾರಿಗೆ ಸೇವೆ ಸಲ್ಲಿಸಲಿ, ರಕ್ತವನ್ನು ಅನಾರೋಗ್ಯ ಪೀಡಿತ ವಿಜ್ಞಾನಿಗಳು, ಯುವ ಪೀಳಿಗೆ, ಸಾಹಿತಿಗಳಿಗೆ ದೇಹದಲ್ಲಿ ತೂರಿ ಬಿಡಿ ಬದುಕಿ ಬಂದು ದೇಶ ಕಟ್ಟಲಿ, ರಕ್ತದಾನ ಮಾಡುವವರ ಬದುಕು ಸಾರ್ಥಕವಾಗುತ್ತದೆ. ಮತ್ತು ರಕ್ತದಾನ ಮಹಾದಾನ ಎಂದು ಹೇಳಿದರು .

ಗೋಪಾಲ ವೈಭಜಂತ್ರಿ ಅವರು ಸ್ವಾಗತಿಸಿ ನಿರೂಪಣೆ ಮಾಡಿದರು ಹಾಗೂ ವಿಭಾಗದ ಅಧಿಕಾರಿಗಳಾದ ಎನ್.ಟಿ.ಪಾಟೀಲ, ಜೆ.ಎನ್.ಇನಾಮದಾರ, ವಿದ್ಯಾವಿಸ್ ಕಾಂಬಳೆ, ಎನ್.ಎಸ್.ಮಂಗಸೂಳಿ ಹಾಗೂ ಕನ್ನಡ ಕ್ರಿಯಾ ಸಮತಿ ಸದಸ್ಯರು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಬಿಸಿಯೂಟ ಅಡುಗೆ ಕೊಠಡಿಯಲ್ಲಿದ್ದ ಕುಕ್ಕರ್ ಸ್ಫೋಟ: ಮಹಿಳೆಗೆ ಗಾಯ

ಬೆಳಗಾವಿ: ರಕ್ತದಾನದ ಶಿಬಿರಕ್ಕೆ ಅರ್ಥಬರಬೇಕಾದರೆ, ರಕ್ತವನ್ನು ದೇಶದ ಗಡಿ ಕಾಯುವ ಸೈನಿಕರಿಗೆ ಅನಾರೋಗ್ಯ ವಿದ್ದಾಗ ಅವರ ದೇಹದಲ್ಲಿ ತೂರಿಬಿಡಿ ಬದುಕಿ ಬಂದು ದೇಶ ರಕ್ಷಣೆ ಮಾಡಲಿ, ಆಸ್ಪತ್ರೆಯಲ್ಲಿರುವ ರೋಗಿಗಳಿಗೆ ತೂರಿ ಬೀಡಿ ಬದುಕಿ ಬಂದು ಸಮಾಜ ಸೇವೆ ಮಾಡಬೇಕು ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ .ಎಂ.ಆರ್.ಮುಂಜಿ ಅವರು ಕಾರ್ಯಕ್ರಮ ಚಾಲನೆ ನೀಡಿ ಮಾತನಾಡಿದರು .

ವಾಯುವ್ಯ ಕರ್ದಾಟಕ ರಸ್ತೆ ಸಾರಿಗೆ ಸಂಸ್ಥೆಯ ಚಿಕ್ಕೋಡಿಯ ವಿಭಾಗಿಯ ಕಚೇರಿಯಲ್ಲಿ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ವಿಭಾಗೀಯ ಕನ್ನಡ ಪ್ರಿಯಾ ಸಮಿತಿ ಆದರ್ಶ ಬ್ಲಡ್ ಬ್ಯಾಂಕ್ ಚಿಕ್ಕೋಡಿ, ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ನ.04 2023 ರಂದು ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.

ರಕ್ತವನ್ನು ಅಪಘಾತದ ಚಾಲಕ & ನಿರ್ವಾಹಕರ ದೇಹದಲ್ಲಿ ತೂರಿ ಬಿಡಿ ಬದುಕಿ ಬಂದು ಸಾರಿಗೆ ಸೇವೆ ಸಲ್ಲಿಸಲಿ, ರಕ್ತವನ್ನು ಅನಾರೋಗ್ಯ ಪೀಡಿತ ವಿಜ್ಞಾನಿಗಳು, ಯುವ ಪೀಳಿಗೆ, ಸಾಹಿತಿಗಳಿಗೆ ದೇಹದಲ್ಲಿ ತೂರಿ ಬಿಡಿ ಬದುಕಿ ಬಂದು ದೇಶ ಕಟ್ಟಲಿ, ರಕ್ತದಾನ ಮಾಡುವವರ ಬದುಕು ಸಾರ್ಥಕವಾಗುತ್ತದೆ. ಮತ್ತು ರಕ್ತದಾನ ಮಹಾದಾನ ಎಂದು ಹೇಳಿದರು .

ಗೋಪಾಲ ವೈಭಜಂತ್ರಿ ಅವರು ಸ್ವಾಗತಿಸಿ ನಿರೂಪಣೆ ಮಾಡಿದರು ಹಾಗೂ ವಿಭಾಗದ ಅಧಿಕಾರಿಗಳಾದ ಎನ್.ಟಿ.ಪಾಟೀಲ, ಜೆ.ಎನ್.ಇನಾಮದಾರ, ವಿದ್ಯಾವಿಸ್ ಕಾಂಬಳೆ, ಎನ್.ಎಸ್.ಮಂಗಸೂಳಿ ಹಾಗೂ ಕನ್ನಡ ಕ್ರಿಯಾ ಸಮತಿ ಸದಸ್ಯರು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಬೆಳಗಾವಿ: ಸೀರೆ ಕದ್ದ ಎಂಟು ಜನ ಅರೆಸ್ಟ್

ಬೆಳಗಾವಿ: ಗ್ರಾಹಕರ ಸೋಗಿನಲ್ಲಿ ಸೀರೆ ಅಂಗಡಿಗೆ ಆಗಮಿಸಿ ದುಬಾರಿ ಬೆಲೆಯ ಸೀರೆಗಳನ್ನ ಕೊಳ್ಳುವ ರೀತಿ ನಟಿಸಿ ಸೀರೆಗಳನ್ನು ಕಳ್ಳತನ ಮಾಡುತ್ತಿದ್ದ ಆರು ಮಂದಿ ಮಹಿಳೆಯರು ಮತ್ತು ಇಬ್ಬರು ಪುರುಷರನ್ನು

ಬೆಳಗಾವಿಯ ಖಡೇಬಜಾರ್ ಠಾಣಾ ಪೊಲೀಸರು ಬಂಧಿಸಿದ್ದಾರೆ. ಮಹಾರಾಷ್ಟ್ರದ ಶಿರಡಿಯಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ.

ಬೆಳಗಾವಿ ನಗರದಲ್ಲಿರುವ ಸೀರೆ ಅಂಗಡಿಯೊಂದರಲ್ಲಿ ನವೆಂಬರ್ 3 ರಂದು ನಾಲ್ಕು ಲಕ್ಷ ಮೌಲ್ಯದ ಸೀರೆಗಳನ್ನು ಕಳ್ಳತನ ಮಾಡಲಾಗಿತ್ತು. ಆರು ಜನ ಮಹಿಳೆಯರು ಏಕಕಾಲದಲ್ಲಿ ಗ್ರಾಹಕರ ಸೋಗಿನಲ್ಲಿ

ಸಮಗ್ರ 8 ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ: 2023

ಉತ್ತಮ ಆರೋಗ್ಯಕ್ಕೆ ಆಯುರ್ವೇದ ಚಿಕಿತ್ಸಾ ಪದ್ಧತಿ ಅಳವಡಿಸಿಕೊಳ್ಳಿ: ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ

ಬೆಳಗಾವಿ: ದೇಶದಲ್ಲಿ ಪಾಶ್ಚಿಮಾತ್ಯ ವೈದ್ಯಕೀಯ ಚಿಕಿತ್ಸಾ ಪದ್ಧತಿಗಳು ಹೆಚ್ಚಾಗಿದ್ದು, ಸನಾತನ ಕಾಲದಿಂದ ಬಂದಿರುವ ಆಯುರ್ವೇದ ಜನರಿಗೆ ತಲುಪಬೇಕಿದೆ. ನಮ್ಮ ಭಾರತೀಯ ಪುರಾತನ ವೈದ್ಯ ಚಿಕಿತ್ಸಾ ಪದ್ಧತಿ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಸರ್ಕಾರ ಸೇರಿದಂತೆ ನಾವೆಲ್ಲರೂ ಶ್ರಮವಹಿಸಬೇಕು ಎಂದು ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಂಯುಕ್ತ ಆಶ್ರಯದಲ್ಲಿ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಶುಕ್ರವಾರ (ನ. 10) ಏರ್ಪಡಿಸಲಾಗಿದ್ದ ಧನ್ವಂತರಿ ಜಯಂತಿ ಅಂಗವಾಗಿ 8 ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಋಷಿ ಮುನಿಗಳು, ನಮ್ಮ ಪೂರ್ವಜರು ಸಾವಿರಾರು ವರ್ಷಗಳ ಹಿಂದೆ ಯಾವುದೇ ವೈದ್ಯಕೀಯ ಸಲಕರಣೆಗಳು ಇಲ್ಲದಿರುವ ಕಾಲದಲ್ಲಿ ಗಿಡಮೂಲಿಕೆಗಳಿಂದ ಆಯುರ್ವೇದ ಔಷಧ ತಯಾರಿಸಿ, ಅನೇಕ ರೋಗಗಳಿಗೆ ಚಿಕಿತ್ಸೆಗಳನ್ನು ನೀಡಿದ್ದಾರೆ. ಅದರಂತೆ ಹಲವಾರು ಆರೋಗ್ಯದ ಸೂಕ್ತ ಮಾಹಿತಿಯ ಧನ್ವಂತರಿ ಗ್ರಂಥಗಳ ಮೂಲಕ ಚಿಕಿತ್ಸಾ ಪದ್ಧತಿಗಳನ್ನು ತಿಳಿಸಿಕೊಟ್ಟಿದ್ದಾರೆ ಎಂದು ಹೇಳಿದರು.

ಇವತ್ತಿನ ವೈದ್ಯಕೀಯ ವಿಜ್ಞಾನದ ಜೊತೆಗೆ ದೇಶದಲ್ಲಿ ಆಯುರ್ವೇದ ಔಷಧಿಯನ್ನು ಮುಂದುವರಿಸಿಕೊಂಡು ನಾಡಿನ ಜನರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಆಯುರ್ವೇದ ಪದ್ಧತಿಯನ್ನು ಹೆಚ್ಚು ಪ್ರಚಾರಗೊಳಿಸಿ, ಜನರಲ್ಲಿ ವಿಶ್ವಾಸ ಮೂಡಿಸಿವ ಕಾರ್ಯಕ್ಕೆ ಮುಂದಾಗಬೇಕು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಉತ್ತರ ವಿಧಾನಸಭಾ ಮತ ಕ್ಷೇತ್ರದ ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಹಿಂದಿನ ಕಾಲದಲ್ಲಿ ಸಾಧು ಸಂತರು ಆಯುರ್ವೇದ ಪದ್ಧತಿ ಅನುಕರಿಸುತ್ತಿದ್ದರು.

ಹಾಗೇ ಇವತ್ತಿನ ಯುವ ಪೀಳಿಗೆಯು ಇದನ್ನು ಅಳವಡಿಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಆಯುಷ್ಮಾನ್ ಇಲಾಖೆಯು ಆರೋಗ್ಯದ ಕುರಿತು ಇನ್ನೂ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಮಾಡಿ ಆಯುರ್ವೇದ ಔಷಧೀಯ ಮಹತ್ವ ತಿಳಿಸಬೇಕು ಇದಕ್ಕೆ ಬೇಕಾಗಿರುವ ಮೂಲ ಸೌಲಭ್ಯಗಳನ್ನು ಸರ್ಕಾರದಿಂದ ನೀಡುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಉಪನ್ಯಾಸ ನೀಡಿದ ಡಾ. ಸಂಜೀವ ಟೋನ್ನಿ ಅವರು ಇವತ್ತಿನ ಯುವ ಪೀಳಿಗೆ ಸಂಪೂರ್ಣವಾಗಿ ಆರೋಗ್ಯದ ಬಗ್ಗೆ ಗಮನ ಹರಿಸಬೇಕು.

ಅವರ ಆರೋಗ್ಯದ ಕುರಿತು ಅವಲೋಕನ ಮಾಡಿಕೊಂಡಾಗ ನಕಾರಾತ್ಮಕ, ಅಭಿಪ್ರಾಯಗಳೇ ಹೆಚ್ಚಾಗಿ ಮೂಡುತ್ತವೆ.

ಆದ್ದರಿಂದ ಮಕ್ಕಳು ಆರೋಗ್ಯ, ಪ್ರಜ್ಞಾವಂತ, ದೈಹಿಕವಾಗಿ, ಶಾರೀರಿಕವಾಗಿ ಸದೃಢರಾಗಲು ಆರೋಗ್ಯದ ಗುಣಾತ್ಮಕ ಬದಲಾವಣೆ ಕಂಡುಕೊಳ್ಳಲು ನಿತ್ಯ ದಿನಚರಿ ಕ್ರಮಗಳ ಪಾಲನೆ ಮಾಡುವುದು ಅವಶ್ಯವಾಗಿದೆ ಎಂದು ಹೇಳಿದರು.

ಮನುಷ್ಯ ಪ್ರತಿನಿತ್ಯ ಸಮರ್ಪಕ ಆಹಾರ, ದೈಹಿಕ ವ್ಯಾಯಾಮ ಯೋಗ, ನಿದ್ದೆ ಸೇರಿದಂತೆ ಆಯುರ್ವೇದ ಔಷಧಿಯ ಸುತ್ರಗಳನ್ನು ಜೀವನಶೈಲಿಯಲ್ಲಿ ಅಳವಡಿಸಿಕೊಂಡರೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯ ಎಂದು ಹೇಳಿದರು.

ಚಿಕಿತ್ಸಾ ಶಿಬಿರ–ಸಸ್ಯಗಳ ಪ್ರದರ್ಶನ:

8ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ 2023ರ ನಿಮಿತ್ಯ ಉಚಿತ ಆಯುರ್ವೇದ ಉಪನ್ಯಾಸ, ಚಿಕಿತ್ಸಾ ಶಿಬಿರ ಹಾಗೂ ಔಷಧಿ ಸಸ್ಯಗಳ ಪ್ರದರ್ಶನ ನಡೆಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಜಿಲ್ಲಾ ಆಯುಷ್ ಇಲಾಖೆ ಅಧಿಕಾರಿ ಡಾ. ಶ್ರೀಕಾಂತ್ ಸುಣಧೋಳಿ, ಎ. ಎಂ ಶೇಕ್ ಹೋಮಿಯೋಪತಿ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಸೈಯದ್, ಪ್ರೊ. ಡಾ. ವಿವೇಕ್ ಕುಲಕರ್ಣಿ, ಮಾರ್ಕೆಟ್ ಪೊಲೀಸ್ ಠಾಣೆಯ ಸಿ.ಪಿ.ಐ ಎಂ. ಕೆ. ದಾಮನ್ನವರ, ಡಾ ಪೂಜಾರಿ, ಡಾ.ಸಂಜೀವ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸೇರಿದಂತೆ ಮಹಿಳೆಯರು ಮಕ್ಕಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಜಾಗೃತಿ ಜಾಥಾ:

ನಗರ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಆರಂಭಗೊಂಡ ಆಯುರ್ವೇದ ಜಾಗೃತಿ ಜಾಥಾ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ರವೀಂದ್ರ ಬಂಗಾರಪ್ಪನವರ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಆಯುರ್ವೇದ ಜಾಗೃತಿ ಜಾಥಾ ಸಂಗೊಳ್ಳಿ ರಾಯಣ್ಣ ವೃತ್ತದ ಮೂಲಕ ನಗರದ ಕುಮಾರ್ ಗಂಧರ್ವ ಕಲಾಮಂದಿರವನ್ನು ತಲುಪಿತು.

ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಶಾಲಾ– ಕಾಲೇಜು, ಆಯುರ್ವೇದ ಕಾಲೇಜು ವಿದ್ಯಾರ್ಥಿಗಳಿಂದ, ಆಯುರ್ವೇದದ ಮಹತ್ವ, ಉಪಯೋಗದ ಬಗ್ಗೆ ಅರಿವು ಮೂಡಿಸುವ ಸಂದೇಶ ಫಲಕಗಳನ್ನು ಪ್ರದರ್ಶಿಸಲಾಯಿತು.

ಆಯುಷ್ ಇಲಾಖೆ ಅಧಿಕಾರಿಗಳಾದ ಡಾ. ಶ್ರೀಕಾಂತ್ ಸುಣಧೋಳಿ, ಮಹಿಳೆಯರು, ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಜಾಥಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಬರ ಮಧ್ಯೆ ಭರ್ಜರಿ ಜನ್ಮದಿನ ಆಚರಿಸಿ ಪೇಚಿಗೆ ಸಿಲುಕಿದ ತಹಶೀಲ್ದಾರ್

ಗದಗ: ಬರದ ನಾಡಿನಲ್ಲಿ ತಹಶೀಲ್ದಾರ್ ಭರ್ಜರಿ ಹುಟ್ಟುಹಬ್ಬ ಆಚರಿಸಿಕೊಂಡು ಪೇಚಿಗೆ ಸಿಲುಕಿದ ಘಟನೆ ಜಿಲ್ಲೆಯ ಮುಂಡರಗಿ ಪಟ್ಟಣದಲ್ಲಿ ನಡೆದಿದೆ.

ಮುಂಡರಗಿ ತಹಶೀಲ್ದಾರ್ ಧನಂಜಯ್ ಮಾಲಗಿತ್ತಿ ಗುರುವಾರ ರಾತ್ರಿ ಭರ್ಜರಿ ಬರ್ತ್‌ಡೇ ಆಚರಿಸಿಕೊಂಡಿರುವುದು ತಡವಾಗಿ ಬೆಳಕಿಗೆ ಬಂದಿದೆ. ತಮ್ಮ ಕಚೇರಿ ಒಳಗಡೆ ಹಾಗೂ ತಹಶೀಲ್ದಾರ್ ಕ್ವಾಟರ್ಸ್ ಆವರಣದಲ್ಲಿ ಬರ್ತ್‌ಡೇ ಸಂಭ್ರಮ ನಡೆದಿದೆ.

ಜಿಲ್ಲೆಯಲ್ಲಿ ಬರಗಾಲ ತಾಂಡವವಾಡುತ್ತಿದ್ದು, ಜನ ಗುಳೆ ಹೋಗುತ್ತಿದ್ದಾರೆ. ಪರಿಹಾರವಿಲ್ಲದೆ ರೈತರು ಜಾನುವಾರುಗಳೊಂದಿಗೆ ಹೊತ್ತಿನ ಊಟಕ್ಕೆ ಪರದಾಡುತ್ತಿದ್ದಾರೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಜನರ ಬೆನ್ನೆಲುಬಾಗಿ ನಿಲ್ಲಬೇಕಾದ ತಹಶೀಲ್ದಾರ್ ಧನಂಜಯ್ 48ನೇ ವರ್ಷದ ಬರ್ತ್‌ಡೇಯನ್ನು ಭರ್ಜರಿಯಾಗಿ ಆಚರಿಸಿಕೊಂಡಿದ್ದಾರೆ.

ಮಹಾರಾಜ ಕುರ್ಚಿಯಲ್ಲಿ ಸೂಟು–ಬೂಟು ಹಾಕಿಕೊಂಡು ಫುಲ್ ಮಿಂಚಿದ್ದು, ಕೆಂಪು, ಹಳದಿ ಬಣ್ಣದ ಬಲೂನ್‌ಗಳಿಂದ ತುಂಬಿದ ವೇದಿಕೆ ಅಲಂಕಾರ, ವೇದಿಕೆ ಸುತ್ತ ಮುತ್ತ ಕಲರ್ ಫುಲ್ ಲೈಟಿಂಗ್ ವ್ಯವಸ್ಥೆ ಮಾಡಲಾಗಿತ್ತು.

ವಿವಿಧ ಇಲಾಖೆ ಅಧಿಕಾರಿಗಳು ಸೇರಿ ನೂರಾರು ಜನರು ಭಾಗಿಯಾಗಿದ್ದರು.

ಕ್ಷೇತ್ರದ ಜನರು ಸಂಕಷ್ಟದ ಸ್ಥಿತಿಯಲ್ಲಿದ್ದಾಗ ತಹಶೀಲ್ದಾರ್ ಧನಂಜಯ್ ಅದ್ದೂರಿ ಬರ್ತ್‌ಡೇ ಆಚರಿಸಿರುವುದು ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ತಹಶೀಲ್ದಾರ್ ಅದ್ದೂರಿ ಬರ್ತ್‌ಡೇ ಜಿಲ್ಲೆಯಾದ್ಯಂತ ತೀವ್ರ ಚರ್ಚೆಗೆ ಕಾರಣವಾಗಿದೆ. ವಿಷಯ ಮಾಧ್ಯಮಗಳಿಗೆ ತಿಳಿಯುತ್ತಿದ್ದಂತೆ ತಮ್ಮ ಫೋನ್ ಅನ್ನು ಸ್ವಿಚ್‌ಆಫ್ ಮಾಡಿಕೊಂಡು ನಾಪತ್ತೆಯಾಗಿದ್ದಾರೆ.

ಹುಕ್ಕೇರಿ: ವಿವಿಧ ಬೇಡಿಕೆ ಈಡೇರಿಸುವಂತೆ ಡಿಇಒಗಳ ಒತ್ತಾಯ

ಹುಕ್ಕೇರಿ: ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ಡಿಇಒ)ಗಳ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಮನವಿ ಸಲ್ಲಿಸಿದರು.

ಬೆಳಗಾವಿ ನಗರದ ಅಂಬೇಡ್ಕರ ಉದ್ಯಾನವನದಲ್ಲಿ ಸಂಘದ ರಾಜ್ಯಾಧ್ಯಕ್ಷ ಭೀಮರೆಡ್ಡಿ ಪಾಟೀಲ ನೇತೃತ್ವದಲ್ಲಿ ಜಮಾಯಿಸಿದ ಕ್ಲರ್ಕ್ ಕಂ ಡಿಇಒಗಳು, ಜಿಲ್ಲೆಯ ವಿವಿಧ ತಾಲೂಕುಗಳ ನೌಕರರ ಸಮಸ್ಯೆಗಳು ಮತ್ತು ಅವುಗಳ ಪರಿಹಾರಕ್ಕೆ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಸುದೀರ್ಘವಾಗಿ ಚರ್ಚಿಸಿದರು. ಬಳಿಕ ಜಿಲ್ಲಾ ಪಂಚಾಯಿತಿಗೆ ತೆರಳಿ ಉಪಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಅವರಿಗೆ ಮನವಿ ಸಲ್ಲಿಸಿದರು.

ನೇರ ನೇಮಕಾತಿ ಮತ್ತು ಜೇಷ್ಠತಾ ಪಟ್ಟಿ ಸಿದ್ಧಪಡಿಸುವ ವೇಳೆ ಸೇವಾ ಹಿರಿತನ ಪರಿಗಣಿಸಬೇಕು. ಈಗಾಗಲೇ ತೆರವಾದ ಅಥವಾ ಖಾಲಿ ಇರುವ ಗ್ರೇಡ್–2 ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಲ್ಲಿ ಡಿಇಒಗಳಿಗೆ ಅನುಮೋದನೆ ನೀಡಬೇಕು. ಎಚ್‌ಆರ್‌ಎಂಎಸ್ ಅಳವಡಿಸಲು ಅನುಮತಿಸಬೇಕು. ಬಾಕಿ ವೇತನ ತ್ವರಿತವಾಗಿ ಪಾವತಿಸಬೇಕು ಎಂದು ಬೇಡಿಕೆಯಲ್ಲಿ ಮನವಿ ಮಾಡಿದ್ದಾರೆ.

ಅಥಣಿ ತಾಲೂಕು ಶಿರಹಟ್ಟಿ ಗ್ರಾಪಂ ಡಿಇಒ ಬಸವರಾಜ ಅಂಬಿ ಅವರನ್ನು ಕರ್ತವ್ಯಕ್ಕೆ ಹಾಜರುಪಡಿಸಿಕೊಳ್ಳಬೇಕು. ಹೊಸದಾಗಿ ರಚನೆಯಾದ ರಾಯಬಾಗ ತಾಲೂಕು ಮಂಟೂರು, ಮೂಡಲಗಿ ತಾಲೂಕು ಕಾಮನಕಟ್ಟಿ ಗ್ರಾಪಂಗಳಲ್ಲಿ ನೇಮಕಾತಿಗೆ ಆದೇಶಿಸಬೇಕು. ಪ್ರತಿ ಮೂರು ತಿಂಗಳಿಗೊಮ್ಮೆ ಕುಂದುಕೊರತೆ ಸಭೆ ಆಯೋಜಿಸಬೇಕು. ವಿವಿಧ ಯೋಜನೆಗಳ ತರಬೇತಿ ನೀಡಬೇಕು ಎಂದು ಡಿಇಒಗಳು ಮನವಿ ಮಾಡಿದರು.

ಜಿಲ್ಲಾ ಅಧ್ಯಕ್ಷ ದಿಲೀಪ ಕಾಂಬಳೆ, ಸಂತೋಷ ಹೊಳೆಪ್ಪಗೋಳ, ಹನುಮಂತ ಮಡಿವಾಳರ, ಪುಂಡಲೀಕ ಪವಾರ, ಸಿದ್ದಣ್ಣ ಹವಳಿ, ಚಂದ್ರಶೇಖರ ರಾಮನಕಟ್ಟಿ, ವಿಠ್ಠಲ ಕೌಂಸಕುಪ್ಪಿ, ಹನುಮಂತ ಇಟಗಿ, ರೇವಪ್ಪ, ವಿಠ್ಠಲ, ಮೋಹನ್ ಮತ್ತಿತರರು ಉಪಸ್ಥಿತರಿದ್ದರು.

ಹಿರೇಬಾಗೇವಾಡಿ ಗ್ರಾಮದ ಜಗನ್ಮಾತೆ ಶ್ರೀ ಜಾಲಿಕರೆಮ್ಮಾ ದೇವಿಯ 14 ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಕುಂಭಮೇಳದ ಕಾರ್ಯಕ್ರಮದಲ್ಲಿ ಶುಕ್ರವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಶಿವಾನಂದ ಶಿವಾಚಾರ್ಯರು (ಮುತ್ನಾಳ), ಶಿವಮೂರ್ತಿ ಅಜ್ಜನವರು, ಉಳವಪ್ಪ ಅಜ್ಜನವರು, ನಾಗೇಂದ್ರ ಮಹಾಸ್ವಾಮಿಗಳು, ಸಿ.ಸಿ. ಪಾಟೀಲ, ಈರಣ್ಣ ಅರಳಿಕಟ್ಟಿ, ಈರಯ್ಯ ಶಾಸ್ತ್ರಿಗಳು, ಶ್ರೀಕಾಂತ ಮಾಧುಭರಮಣ್ಣವರ್, ಸುರೇಶ ಇಟಗಿ, ಬಿ. ಎನ್. ಪಾಟೀಲ, ರಘು ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಡಿಪ್ಲೋಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್, ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್ ಬೆಳಗಾವಿ 6 ತಿಂಗಳ/180 ದಿನಗಳ ಅವಧಿಯ ದೂರ ಶಿಕ್ಷಣ (ಡಿ.ಸಿ.ಎಂ) ಡಿಪ್ಲೋಮಾ ಇನ್ ಕೋ– ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿಗಳ ಆಹ್ವಾನಿಸಲಾಗಿದೆ.

ತರಬೇತಿಗೆ ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಯ ವಿವಿಧ ಸಹಕಾರ ಸಂಘ–ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಇದು ದೂರ ಶಿಕ್ಷಣ ತರಬೇತಿ ಆಗಿದ್ದು ಸಹಕಾರ ಸಂಘಗಳ ಸಿಬ್ಬಂದಿಗಳು ಪದೋನ್ನತಿ ಹೊಂದಲು ಕಡ್ಡಾಯವಾಗಿದು, ಸಹಕಾರ ಸಂಘ ಸಂಸ್ಥೆಗಳಲ್ಲಿ ಒಂದು ವರ್ಷ ಸೇವೆ ಸಲ್ಲಿಸಿದ ಸಿಬ್ಬಂದಿಗಳು ತರಬೇತಿ ಪಡೆಯಲು ಅರ್ಹರಾಗಿರುತ್ತಾರೆ. ನ.8 2023 ರಿಂದ ನ.30 2023 ರೊಳಗಾಗಿ ಅರ್ಜಿ ಗಳನ್ನು ಖುದ್ದಾಗಿ/ ಆನ್‌ಲೈನ್ ಮೂಲಕ ಪಡೆದು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು ಕೆ.ಐ.ಸಿ.ಎಂ.ರಾಮತೀರ್ಥನಗರ ಬೆಳಗಾವಿ ಅವರನ್ನು ಸಂಪರ್ಕಿಸಬಹುದು, ಆನ್‌ಲೈನ್ ಲಿಂಕ್ www.ksefdcm.co.in ಬೆಟ್ಟಿ ನೀಡಬಹುದು, ಹಾಗೂ ದೂರವಾಣಿ ಸಂಖ್ಯೆ: 0831–2950026, ಮೊ: 9449007661, 8884259545, 8050533207, ಗೆ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿಯ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಪ್ ಕೋ ಆಪರೇಟಿವ್ ಮ್ಯಾನೇಜ್ ಮೆಂಟ್ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಬಯಸದೇ ಬಂದ ರಾಜಯೋಗ' ಪೋಸ್ಟರ್, ಹಾಡು ಬಿಡುಗಡೆ

ಬೆಂಗಳೂರು: ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆದ ಕರ್ನಾಟಕ ಚಲನಚಿತ್ರೋತ್ಸವದಲ್ಲಿ ಅಭಿ ಕ್ರಿಯೇಷನ್ಸ್ ಗದಗ ಅವರ 'ಬಯಸದೇ ಬಂದ ರಾಜಯೋಗ' ಕಿರು ಚಿತ್ರದ ಪೋಸ್ಟರ್ ಹಾಗೂ ರಾಜಯೋಗ ಬಂದಿದೆ ನನ್ನ ನಿನ್ನ ಪ್ರೀತಿಗೆ ಹಾಡು ಬಿಡುಗಡೆ ಮಾಡಲಾಯಿತು.

ಚಂದ್ರಶೇಖರ ಮಾಡಲಗೇರಿ ಸಾರಥ್ಯದಲ್ಲಿ ಜರುಗಿದ ರಾಜರತ್ನ ಪ್ರಶಸ್ತಿ, ಪುನೀತ ಪ್ರಶಸ್ತಿ ಸಮಾರಂಭದಲ್ಲಿ ಉದ್ಘಾಟನೆಯನ್ನು ಹಿರಿಯ ಚಲನಚಿತ್ರ ಕಲಾವಿದರಾದ ಡಾ.ಚಿಕ್ಕಹೆಜ್ಜಾಜಿ ಮಹದೇವ್ ನೆರವೇರಿಸಿದರು.

ನಂತರ ನಡೆದ 'ಬಯಸದೇ ಬಂದ ರಾಜಯೋಗ' ಪೋಸ್ಟರ್ ಹಾಗೂ ಹಾಡನ್ನು ರಂಗಭೂಮಿ, ಕಿರುತೆರೆ ಮತ್ತು ಚಲನಚಿತ್ರ ಜನಪ್ರಿಯ ಕಲಾವಿದರಾದ ಗಣೇಶರಾವ್ ಕೇಸರಕರ ಬಿಡುಗಡೆ ಮಾಡಿ ಅರವಿಂದ ಮುಳಗುಂದ ನಿರ್ದೇಶನದ ಈ ಕಿರುಚಿತ್ರದ ಹಾಡು ಪ್ರಭು ಗಂಜಿಹಾಳ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗುತ್ತಿದ್ದು ತುಂಬ ಸೊಗಸಾಗಿದೆ ಎಲ್ಲರೂ ನೋಡಿ, ಪ್ರೋತ್ಸಾಹಿಸಿ ಎಂದರು.

ಬಹುಭಾಷಾ ಚಲನಚಿತ್ರ ನಿರ್ದೇಶಕ ರಾಜೀವಕೃಷ್ಣ ಗಾಂಧಿ, ಚಲನಚಿತ್ರ, ಕಿರುತೆರೆ ನಟಿ ಮತ್ತು ನಿರ್ಮಾಪಕಿ ಸುನಂದಾ ಕಲಬುರ್ಗಿ, ಗೀತರಚನೆಕಾರ, ಸಹನಿರ್ದೇಶಕ ಮನ್ವರ್ಷಿ ನವಲಗುಂದ, ನಿರ್ಮಾಪಕ ನಟ ಲೋಕೇಶ ವಿ ,ಸಿನಿಮಾ ಪತ್ರಕರ್ತ ಶರಣು ಹುಲ್ಲೂರ, ನಾಯಕನಟ ಡಾ.ಕಿರಣಚಂದ್ರ , ಕಲಾವಿದ ಸಿದ್ದುಕೃಷ್ಣ ಢೇಕಣಿ, ನಿರ್ಮಾಪಕ ಎ.ಚಂದ್ರಶೇಖರ, ಸಹನಿರ್ದೇಶಕ ಡಾ.ಪ್ರಭು ಗಂಜಿಹಾಳ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಬ್ಬಿರುಚಿತ್ರದಲ್ಲಿ ನಾಯಕ ನಟರಾಗಿ ವೈದ್ಯ ಡಾ.ಕಿರಣಚಂದ್ರ, ನಾಯಕಿಯರಾಗಿ ಅಪೂರ್ವ ಭರಣಿ, ಅಮೃತಾ ಅಪೂರ್ಣ, ಸಿದ್ದುಕೃಷ್ಣ ಢೇಕಣಿ, ಎ.ಚಂದ್ರಶೇಖರ, ಕಿಶನ್‌ರಾವ್ ಕುಲಕರ್ಣಿ (ಆನೆಹೊಸೂರ), ಡಾ.ಕಲ್ಮೇಶ್ ಹಾವೇರಿಪೇಟ್ , ಎನ್ ಎಸ್ ಪಾಟೀಲ್ (ಹೂಲಿ), ರಾಜೇಶ್ವರಿ, ಕೀರ್ತಿ ಅರವಿಂದ್, ಲಕ್ಷ್ಮೀ ಎಸ್.ಬಿ, ರಶ್ಮಿ ಮಾಲಸೊರೆ, ಶಂಭು ಪಾಟೀಲ್, ಗಣೇಶ್ ಜಾಧವ್, ಶ್ರೇಯಸ್ ಶಿಂಧೆ, ರಾಜೇಶ್ವರಿ ಹಂಜಿ, ಅಂಕಿತ ಕುಲಕರ್ಣಿ, ಆನಂದ ಜೋಶಿ, ರಾಮು ಕಲಾದಗಿ, ಆರ್. ಜೆ.ರಾಘವೇಂದ್ರ, ವೀರಣ್ಣ ವಿಠಲಾಪೂರ, ಪ್ರಭು ಹಂಚಿನಾಳ, ರಾಹುಲ್ ದತ್ತಪ್ರಸಾದ, ರಾಜೀವ್ ಸಿಂಗ್ ಹಲವಾಯಿ, ಮೊದಲಾದವರು ಅಭಿನಯಿಸಿದ್ದಾರೆ.

ದಯಾನಂದ.ಜಿ.ಪ್ರಶಾಂತ್, ರಾಜೇಶ್ ಛಾಯಾಗ್ರಹಣ, ಕಥೆ, ಸಂಭಾಷಣೆ ಮಧು ಜೋಶಿ, ಸಾಹಿತ್ಯ ಪ್ರಮೋದ್ ಜೋಶಿ, ಪ್ರಸ